Volume : 9 | Issue : 162 | September : 12 : 2026 : Saturday
ಸಂಪುಟ : 9 | ಸಂಚಿಕೆ : 162 | ಸೆಪ್ಟಂಬರ್ : 12 : 2026 : ಶನಿವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481



‘ಅಮೆರಿಕಾ ಅಮೆರಿಕಾ 2’ ಚಿತ್ರದ ಪ್ರಮುಖ ಪಾತ್ರದಲ್ಲಿ ಶಾನ್ವಿ ಶ್ರೀವಾಸ್ತವ್. ನುಡಿ ಪಾತ್ರದ ಭಾವನಾತ್ಮಕ ತೊಳಲಾಟವನ್ನು ಶಾನ್ವಿ ಪರಿಣಾಮಕಾರಿಯಾಗಿ ಕಟ್ಟಿಕೊಟ್ಟಿದ್ದು, ಪೃಥ್ವಿ ಅಂಬರ್ ಹಾಗೂ ನಿರೂಪ್ ಭಂಡಾರಿ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ಅಕ್ರಮ ಬಂದೂಕು ಒಪ್ಪಿಸಿ, ಇಲ್ಲದಿದ್ದರೆ ಕಠಿಣ ಕ್ರಮ: ಡಿಕೆಶಿ ಪುಟ 4

ಗಣೇಶ ಹಬ್ಬಕ್ಕೆ ದೊರೆಯುತ್ತವೆ ಬಗೆ ಬಗೆಯ ಬಾಡಿಗೆ ಗಣೇಶ ಪುಟ 3



● ವಿಕ್ರಮ ವಾಹಿನಿ । ನವದೆಹಲಿ/ಬೆಂಗಳೂರು

ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ (ಫೆಮಾ) ಉಲ್ಲಂಘನೆ ಹಾಗೂ ವಿದೇಶಿ ಹೂಡಿಕೆಗಳಿಗೆ ಸಂಬಂಧಿಸಿದ ಆರೋಪಗಳ ಹಿನ್ನೆಲೆಯಲ್ಲಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಅವರ ಕುಟುಂಬ ಸದಸ್ಯರು ಹಾಗೂ ಆಪ್ತರಿಗೆ ಸೇರಿದ 18 ಸ್ಥಳಗಳಲ್ಲಿ ಸೆ.9 ಮತ್ತು 10ರಂದು ನಡೆಸಿದ ಶೋಧದಲ್ಲಿ ರೂ 3.45 ಕೋಟಿ ಮೌಲ್ಯದ ನಗದು ಮತ್ತು ವಿದೇಶಿ ಕರೆನ್ಸಿ ಪತ್ತೆಯಾಗಿದೆ ಎಂದು ಜಾರಿ ನಿರ್ದೇಶನಾಲಯ (ಇಡಿ) ಶುಕ್ರವಾರ ತಿಳಿಸಿದೆ.

ಬೆಳಗಾವಿಯ ಗೋಕಾಕ್‌ನಲ್ಲಿರುವ ಸತೀಶ್ ಜಾರಕಿಹೊಳಿ ಅವರ ನಿವಾಸ, ಬೆಂಗಳೂರಿನ ಡಾಲರ್ಸ್ ಕಾಲೋನಿ ಮತ್ತು ಕ್ರೆಸೆಂಟ್ ರಸ್ತೆಯಲ್ಲಿರುವ ಕಚೇರಿ–ನಿವಾಸ ಸೇರಿದಂತೆ ಅವರ ಪುತ್ರಿ ಹಾಗೂ ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ, ಪುತ್ರ ರಾಹುಲ್ ಜಾರಕಿಹೊಳಿ ಮತ್ತು ವೈ.ಡಿ. ಮಂಜುನಾಥ್ ಸೇರಿದಂತೆ ಆಪ್ತರಿಗೆ ಸೇರಿದ ಆಸ್ತಿಗಳಲ್ಲಿ ಶೋಧ ನಡೆಸಲಾಗಿದೆ ಎಂದು ಇಡಿ ಹೇಳಿದೆ.

ಶೋಧದ ವೇಳೆ ರೂ 3.3 ಕೋಟಿ ಲೆಕ್ಕಕ್ಕೆ ಸಿಗದ ನಗದು ಹಾಗೂ ಅಮೆರಿಕನ್ ಡಾಲರ್, ಯುರೋ ಸೇರಿದಂತೆ ರೂ 15 ಲಕ್ಷ ಮೌಲ್ಯದ ವಿದೇಶಿ ಕರೆನ್ಸಿ ವಶಪಡಿಸಿಕೊಳ್ಳಲಾಗಿದೆ ಎಂದು ತನಿಖಾ ಸಂಸ್ಥೆ ತಿಳಿಸಿದೆ.

**ವಿದೇಶಿ ಕಂಪನಿಗಳಲ್ಲಿ ಹೂಡಿಕೆ ಆರೋಪ**

ಸತೀಶ್ ಜಾರಕಿಹೊಳಿ ಕುಟುಂಬದ ಸದಸ್ಯರು ಕಾಂಗೋ ಮತ್ತು ಜಾಂಬಿಯಾದಲ್ಲಿನ ಹಲವು ವಿದೇಶಿ ಸಂಸ್ಥೆಗಳಲ್ಲಿ ಷೇರುಗಳನ್ನು ಹೊಂದಿರುವುದು ತನಿಖೆಯಲ್ಲಿ ಪತ್ತೆಯಾಗಿದೆ ಎಂದು ಇಡಿ ಹೇಳಿದೆ.

ಕಾಂಗೋದಲ್ಲಿನ ಚಿನ್ನದ ಗಣಿಗಾರಿಕೆ ಸಂಸ್ಥೆ ‘ಮ್ಯಾಗ್ನಿಟ್ಯೂಡ್ ಸ್ಟಾರ್ ಎಸ್‌ಎಆರ್‌ಎಲ್’ನಲ್ಲಿ ಸತೀಶ್ ಜಾರಕಿಹೊಳಿ ಅವರು ಸುಮಾರು ಶೇ.40ರಷ್ಟು ಷೇರುಗಳನ್ನು ಹೊಂದಿದ್ದಾರೆ ಎಂಬ ದಾಖಲೆಗಳು ದೊರೆತಿವೆ ಎಂದಿದೆ.

ಆಫ್ರಿಕಾದಲ್ಲಿ ಗಣಿಗಾರಿಕೆ ಆಸ್ತಿಗಳನ್ನು ಹೊಂದಿರುವ ಇತರ ವಿದೇಶಿ ಸಂಸ್ಥೆಗಳಿಗೆ ಸಂಬಂಧಿಸಿದ ದಾಖಲೆಗಳನ್ನೂ ವಶಪಡಿಸಿಕೊಳ್ಳಲಾಗಿದೆ ಎಂದು ಇಡಿ ತಿಳಿಸಿದೆ.




**ಟೆಂಡರ್‌ಗಾಗಿ ಲಂಚದ ಆರೋಪ**

ಭಾರತ್ ವಾಣಿಜ್ಯ ಈಸ್ಟರ್ನ್ ಪ್ರೈವೇಟ್ ಲಿಮಿಟೆಡ್ (BVEPL) ಎಂಬ ಕಂಪನಿಯ ಮೇಲೂ ಶೋಧ ನಡೆಸಲಾಗಿದ್ದು, ಲೋಕೋಪಯೋಗಿ ಇಲಾಖೆಯ ಗುತ್ತಿಗೆ ಪಡೆಯಲು ಈ ಕಂಪನಿ ಭಾರಿ ಪ್ರಮಾಣದಲ್ಲಿ ಲಂಚ ನೀಡಿದೆ ಎಂದು ಇಡಿ ಆರೋಪಿಸಿದೆ. 2ನೇ ಪುಟಕ್ಕೆ...

owners of BVEPL were covered during the said search. It was found that kin and family members of Sh. Jharkiholi namely his daughter Ms Priyanka Jharkiholi, his son Sh Rahul Jharkiholi and his sister Ms Mahadevi Manjunath who is also wife of Sh. YD Manjunath, have acquired shareholding in multiple foreign entities, viz. M/s. Eldorado Mining Resources, Congo, and M/s. Nava Aurum Mining Ltd, Zambia etc. It was also revealed that Sh. Satish Jarkiholi has acquired nearly 40% stakes in M/s. Magnitude Star SARL, Congo, which is into gold mining. Documents of various other foreign entities owning mining assets in Africa were also found and seized.

## ರೂ 3.45 ಕೋಟಿ ನಗದು ಜಪ್ತಿ; ವಿದೇಶಿ ಹೂಡಿಕೆ ಬಯಲು

- **18 ಸ್ಥಳಗಳಲ್ಲಿ ಇಡಿ ದಾಳಿ:** ಸತೀಶ್ ಜಾರಕಿಹೊಳಿ, ಕುಟುಂಬಸ್ಥರು ಹಾಗೂ ಆಪ್ತರಿಗೆ ಸೇರಿದ ಸ್ಥಳಗಳಲ್ಲಿ ಸೆ.9–10ರಂದು ಶೋಧ.
- **ರೂ 3.45 ಕೋಟಿ ನಗದು ಜಪ್ತಿ:** ರೂ 3.3 ಕೋಟಿ ಲೆಕ್ಕಕ್ಕೆ ಸಿಗದ ನಗದು ಹಾಗೂ ರೂ 15 ಲಕ್ಷ ಮೌಲ್ಯದ ವಿದೇಶಿ ಕರೆನ್ಸಿ ವಶ.
- **ವಿದೇಶಿ ಹೂಡಿಕೆ ಆರೋಪ:** ಕಾಂಗೋ, ಜಾಂಬಿಯಾ ಸೇರಿದಂತೆ ಹಲವು ವಿದೇಶಿ ಕಂಪನಿಗಳಲ್ಲಿ ಷೇರು ಹೂಡಿಕೆ ಮಾಡಿರುವುದಾಗಿ ಇಡಿ ಹೇಳಿಕೆ.
- **ಕಾಂಗೋ ಗಣಿಗಾರಿಕೆ ಕಂಪನಿಯಲ್ಲಿ ಶೇ.40ರಷ್ಟು ಷೇರು:** ಸತೀಶ್ ಜಾರಕಿಹೊಳಿ ಹೊಂದಿರುವುದಾಗಿ ಇಡಿ ಹೇಳಿದೆ.
- **ಪಿಡಬ್ಲ್ಯುಡಿ ಟೆಂಡರ್‌ಗಾಗಿ ಲಂಚದ ಆರೋಪ:** ಬಿವಿಇಪಿಎಲ್ ಕಂಪನಿಯು ಟೆಂಡರ್ ಪಡೆಯಲು ಭಾರಿ ಪ್ರಮಾಣದಲ್ಲಿ ಲಂಚ ನೀಡಿದೆ ಎಂದು ಇಡಿ ಆರೋಪ.
- **ವಿದೇಶಿ ಆಸ್ತಿಗಳಿಗೆ ಹಣ ವರ್ಗಾವಣೆ ಶಂಕೆ:** ಲಂಚದ ಹಣವನ್ನು ವಿದೇಶಿ ಆಸ್ತಿ ಖರೀದಿ ಹಾಗೂ ಹೂಡಿಕೆಗೆ ಬಳಸಲಾಗಿದೆ ಎಂದು ಇಡಿ ಹೇಳಿಕೆ.
- **ದಾಖಲೆಗಳ ಜಪ್ತಿ:** ವಿದೇಶಿ ಗಣಿಗಾರಿಕೆ ಸಂಸ್ಥೆಗಳು ಹಾಗೂ ಹೂಡಿಕೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ.
- **ತನಿಖೆ ಮುಂದುವರಿಕೆ:** ಅನಧಿಕೃತ ಮಾರ್ಗದ ಮೂಲಕ ಕಾಂಗೋ ಸಂಸ್ಥೆಯಲ್ಲಿ ಹಣ ಹೂಡಿಕೆ ಮಾಡಿರುವ ಬಗ್ಗೆ ಸಾಕ್ಷ್ಯ ಸಿಕ್ಕಿದೆ ಎಂದು ಇಡಿ ತಿಳಿಸಿದೆ.

## ■ ಸುದ್ದಿ ಚುಟುಕು

### ಸತೀಶ್ ಜಾರಕಿಹೊಳಿಗೆ ಕಾಂಗ್ರೆಸ್ ನಾಯಕರ ಅಭಯ

● ವಿಕ್ರಮ ವಾಹಿನಿ । ಬೆಂಗಳೂರು

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಬೆಂಗಳೂರು ಹಾಗೂ ಬೆಳಗಾವಿ ನಿವಾಸಗಳು ಸೇರಿದಂತೆ ಪುತ್ರಿ ಪ್ರಿಯಾಂಕಾ ಹಾಗೂ ಪುತ್ರ ರಾಹುಲ್‌ಗೆ ಸಂಬಂಧಿಸಿದ ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ಎರಡು ದಿನಗಳ ಕಾಲ ನಡೆಸಿದ ದಾಳಿ ಮುಕ್ತಾಯಗೊಂಡ ಬೆನ್ನಲ್ಲೇ ಕಾಂಗ್ರೆಸ್ ನಾಯಕರು ಸಚಿವರ ಬೆನ್ನಿಗೆ ನಿಂತಿದ್ದಾರೆ.

ಇಡಿ ದಾಳಿಯನ್ನು ರಾಜಕೀಯ ಪ್ರೇರಿತ ಎಂದು ಕಾಂಗ್ರೆಸ್ ನಾಯಕರು ಆರೋಪಿಸಿರುವ ಬೆನ್ನಲ್ಲೇ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಸೇರಿದಂತೆ ಹಿರಿಯ ಸಚಿವರು ಹಾಗೂ ಶಾಸಕರು ಬೆಂಗಳೂರಿನ ಕ್ರೆಸೆಂಟ್ ರಸ್ತೆಯಲ್ಲಿರುವ ಸತೀಶ್ ಜಾರಕಿಹೊಳಿ ಅವರ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಿದರು. ಈ ವೇಳೆ ಸಚಿವರಿಗೆ ಧೈರ್ಯ ತುಂಬಿ, ಎದೆಗುಂದದಂತೆ ಅಭಯ ನೀಡಿದ್ದಾರೆ ಎಂದು ತಿಳಿದುಬಂದಿದೆ. 2ನೇ ಪುಟಕ್ಕೆ...

### ಪೇಪರ್‌ವೇಟ್ ಹಲ್ಲೆ: ಮಾಜಿ ಎಸ್‌ಪಿ ವಿರುದ್ಧ ಎಫ್‌ಐಆರ್ ರದ್ದಿಲ್ಲ

● ವಿಕ್ರಮ ವಾಹಿನಿ । ಬೆಂಗಳೂರು

ಅಧೀನ ಪೊಲೀಸ್ ಅಧಿಕಾರಿಯೊಬ್ಬರ ಮೇಲೆ ಪೇಪರ್‌ವೇಟ್ ಎಸೆದು ಗಾಯಗೊಳಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಚಿಕ್ಕಮಗಳೂರು ಜಿಲ್ಲೆಯ ಮಾಜಿ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ವಿಕಾಶ್ ಕುಮಾರ್ ವಿಕಾಶ್ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿದೆ.

ಆದರೆ, ಪ್ರಕರಣದ ಎರಡನೇ ಆರೋಪಿಯಾಗಿರುವ ಮಾಜಿ ಸರ್ಕಲ್ ಇನ್ಸ್‌ಪೆಕ್ಟರ್ ಪಂಚಾಕ್ಷರಯ್ಯ ವಿರುದ್ಧದ ಎಫ್‌ಐಆರ್ ಅನ್ನು ನ್ಯಾಯಮೂರ್ತಿ ರವಿ ವಿ. ಹೊಸಮನಿ ಅವರ ಏಕಸದಸ್ಯ ಪೀಠ ರದ್ದುಪಡಿಸಿದೆ. ದೂರುದಾರರನ್ನು ಕೊಠಡಿಗೆ ಕರೆಸಿ ಬಾಗಿಲು ಹಾಕಿ ಪೇಪರ್‌ವೇಟ್‌ನಿಂದ ಹೊಡೆದು ಹುಬ್ಬಿನಲ್ಲಿ ರಕ್ತಸ್ರಾವವಾಗುವಂತೆ ಗಾಯಗೊಳಿಸಿದ ಕೃತ್ಯವನ್ನು ಅಧಿಕೃತ ಕರ್ತವ್ಯದ ಪ್ರಾಮಾಣಿಕ ನಿರ್ವಹಣೆ ಎಂದು ಪರಿಗಣಿಸಲಾಗದು ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

ದೈಹಿಕ ಹಲ್ಲೆ ನಡೆಸಿ ಗಂಭೀರ ಗಾಯಗೊಳಿಸಿದ ಆರೋಪವು ಅಧಿಕೃತ ಕರ್ತವ್ಯದೊಂದಿಗೆ ನೇರವಾಗಿ ಸಂಬಂಧಿಸಿರುವಂತೆ ಕಾಣುವುದಿಲ್ಲ. ಈ ಹಂತದಲ್ಲಿ ಪ್ರಕರಣದ ಸಾಕ್ಷ್ಯಗಳನ್ನು ಸಂಪೂರ್ಣವಾಗಿ ಪರಿಶೀಲಿಸದೆ ಎಫ್‌ಐಆರ್ ರದ್ದುಪಡಿಸಲು ಸಾಧ್ಯವಿಲ್ಲ. 2ನೇ ಪುಟಕ್ಕೆ...

## ಕೆಪಿಎಸ್‌ಸಿ ಹಗರಣ: ಗೆಳತಿಗೆ ಚಿನ್ನ, ಅಣ್ಣನಿಗೆ ವಿಲ್ಲಾ!

### ಅಭ್ಯರ್ಥಿಗಳಿಂದ ಸಂಗ್ರಹಿಸಿದ ಲಂಚದ ಹಣ ಬಳಕೆ ಶಂಕೆ; ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ವಿರುದ್ಧ ಸಿಐಡಿ ತನಿಖೆ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನಡೆಸಿದ್ದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಅಕ್ರಮ ಪ್ರಕರಣದಲ್ಲಿ ಬಂಧಿತರಾಗಿರುವ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರು, ಅಭ್ಯರ್ಥಿಗಳಿಂದ ಸಂಗ್ರಹಿಸಿದ ಅಕ್ರಮ ಹಣದಲ್ಲಿ ಗೆಳತಿಗೆ ರೂ 26 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ಅಣ್ಣನ ಹೆಸರಿನಲ್ಲಿ ಐಷಾರಾಮಿ ವಿಲ್ಲಾ ಖರೀದಿಸಿರುವುದು ಸಿಐಡಿ ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎಂದು ಮೂಲಗಳು ತಿಳಿಸಿವೆ.



ಸಿಐಡಿ ತನಿಖೆ ಪ್ರಕಾರ, ಜ್ಞಾನೇಂದ್ರ ಕುಮಾರ್ ಅವರು ಅಯೋಧ್ಯೆ ಮೂಲದ ತಮ್ಮ ಗೆಳತಿಯನ್ನು ಬೆಂಗಳೂರಿಗೆ ಕರೆಸಿಕೊಂಡು ಡಿಕನ್ಸನ್ ರಸ್ತೆಯ ಪ್ರತಿಷ್ಠಿತ ಆಭರಣ ಮಳಿಗೆಗೆ ಕರೆದೊಯ್ದು ಸುಮಾರು ರೂ 26 ಲಕ್ಷ ಮೌಲ್ಯದ ಚಿನ್ನಾಭರಣ ಖರೀದಿಸಿ ಉಡುಗೊರೆಯಾಗಿ ನೀಡಿದ್ದಾರೆ ಎನ್ನಲಾಗಿದೆ.

ಬ್ಯಾಂಕ್ ಖಾತೆಯಿಂದ ರೂ 26 ಲಕ್ಷ ವರ್ಗಾವಣೆ ಆಭರಣ ಖರೀದಿಗೆ ಓಂ ಶ್ರೀ ಲಕ್ಷ್ಮೀ ಸೌಹಾರ್ದ ಸಹಕಾರಿ ಸಂಘದ ಬಸವರಾಜು ಎಂಬವರ ಬ್ಯಾಂಕ್ ಖಾತೆಯಿಂದ ರೂ 26 ಲಕ್ಷ ವರ್ಗಾಯಿಸಿ ಬಿಲ್ ಪಾವತಿಸಿರುವುದು ತನಿಖೆಯಲ್ಲಿ ಪತ್ತೆಯಾಗಿದೆ ಎಂದು ಮೂಲಗಳು ತಿಳಿಸಿವೆ. ಆಭರಣ ಮಳಿಗೆಯಲ್ಲಿ ಜ್ಞಾನೇಂದ್ರ ಕುಮಾರ್ ಹಾಗೂ ಅವರ ಗೆಳತಿ ಇರುವ ಛಾಯಾಚಿತ್ರಗಳು ಮತ್ತು ಖರೀದಿ ಬಿಲ್‌ಗಳನ್ನು ಸಿಐಡಿ ವಶಪಡಿಸಿಕೊಂಡಿದೆ ಎನ್ನಲಾಗಿದೆ.

ಅಕ್ರಮ ಹಣದಲ್ಲಿ ಖರೀದಿಸಲಾಗಿದೆ ಎಂದು ಶಂಕಿಸಲಾಗಿರುವ ಆಭರಣಗಳನ್ನು ಜಪ್ತಿ ಮಾಡುವ ಹಿನ್ನೆಲೆಯಲ್ಲಿ, ಜ್ಞಾನೇಂದ್ರ ಕುಮಾರ್ ಅವರ ಗೆಳತಿಗೆ ಶುಕ್ರವಾರ ಸಿಐಡಿ ಕಚೇರಿಯಲ್ಲಿ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ ಎಂದು ತಿಳಿದುಬಂದಿದೆ.

ಜ್ಞಾನೇಂದ್ರ ಕುಮಾರ್ ಅವರು 2016ರ ಬ್ಯಾಚ್‌ನ ಕರ್ನಾಟಕ ಕೇಡರ್‌ನ ಐಎಎಸ್ ಅಧಿಕಾರಿಯಾಗಿದ್ದು, 2024ರ ಫೆಬ್ರವರಿಯಿಂದ 2026ರ ಮಾರ್ಚ್‌ವರೆಗೆ ಕೆಪಿಎಸ್‌ಸಿ ಪರೀಕ್ಷಾ ನಿಯಂತ್ರಕರಾಗಿ ಕಾರ್ಯನಿರ್ವಹಿಸಿದ್ದರು. ಈ ಅವಧಿಯಲ್ಲಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪ ಐಷಾರಾಮಿ ವಿಲ್ಲಾವೊಂದನ್ನು ಖರೀದಿಸಿರುವುದು ತನಿಖೆಯಲ್ಲಿ ಪತ್ತೆಯಾಗಿದೆ ಎನ್ನಲಾಗಿದೆ.

ಅಕ್ರಮ ಹಣದ ಮೂಲ ಹಾಗೂ ಅದರ ಬಳಕೆಯ ಕುರಿತು ಸಿಐಡಿ ಅಧಿಕಾರಿಗಳು ಹೆಚ್ಚಿನ ಮಾಹಿತಿ ಕಲೆಹಾಕುತ್ತಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ಬ್ಯಾಂಕ್ ಖಾತೆಗಳ ವಹಿವಾಟು, ಆಸ್ತಿ ಖರೀದಿ ದಾಖಲೆಗಳು ಹಾಗೂ ಆರೋಪಿಗಳೊಂದಿಗೆ ಹಣಕಾಸು ವ್ಯವಹಾರ ನಡೆಸಿದವರನ್ನು ವಿಚಾರಣೆಗೆ ಒಳಪಡಿಸಲಾಗುತ್ತಿದೆ.

ಈ ವಿಲ್ಲಾ ಅವರ ಅಣ್ಣ ಕಮಲಾಪತಿ ಅವರ ಹೆಸರಿನಲ್ಲಿದ್ದು, ಆಸ್ತಿ ಖರೀದಿಗೆ ಅಕ್ರಮ ಹಣ ಬಳಕೆಯಾಗಿದೆಯೇ ಎಂಬುದರ ಕುರಿತು ಸಿಐಡಿ ತನಿಖೆ ನಡೆಸುತ್ತಿದೆ. ಅಭ್ಯರ್ಥಿಗಳಿಂದ ಸಂಗ್ರಹಿಸಲಾಗಿತ್ತು ಎನ್ನಲಾದ ಲಂಚದ ಹಣದ ಬಳಕೆ ಹಾಗೂ ಅದರ ಮೂಲಕ ಮಾಡಿರುವ ಆಸ್ತಿ ಮತ್ತು ಚಿನ್ನಾಭರಣ ಖರೀದಿಗಳ ಕುರಿತು ತನಿಖೆ ಮುಂದುವರಿದಿದೆ.

## ಕಾಳಿಘಾಟ್‌ನಲ್ಲಿ ಮೀನಿನ ಭೋಗ ಸವಿದ ಸುವೇಂದು ಅಧಿಕಾರಿ



● ವಿಕ್ರಮ ವಾಹಿನಿ । ಕೋಲ್ಕತ್ತಾ

ಪಶ್ಚಿಮ ಬಂಗಾಳದ ಕಾಳಿಘಾಟ್ ದೇವಸ್ಥಾನದಲ್ಲಿ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರು ಸಾಂಪ್ರದಾಯಿಕ ಮೀನಿನ ಭೋಗ್ ಸೇವಿಸಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ದುರ್ಗಾ ಪೂಜೆ ಸಂದರ್ಭದಲ್ಲಿ ಮಾಂಸಾಹಾರ ಸೇವನೆ ಕುರಿತ ವಿವಾದಕ್ಕೆ ಹೊಸ ತಿರುವು ನೀಡಿದೆ.

ಕೌಶಿಕಿ ಅಮಾವಾಸ್ಯೆ ಅಂಗವಾಗಿ ಕಾಳಿಘಾಟ್ ದೇವಸ್ಥಾನಕ್ಕೆ ಭೇಟಿ ನೀಡಿದ ಸುವೇಂದು ಅಧಿಕಾರಿ, ದೇವಿಗೆ ಅರ್ಪಿಸಲಾದ ಸಾಂಪ್ರದಾಯಿಕ ಭೋಗವನ್ನು ನೆಲದ ಮೇಲೆ ಕುಳಿತು ಸೇವಿಸಿದರು.

ಕಾಳಿಘಾಟ್‌ನಲ್ಲಿ ದೇವಿಗೆ ಮೀನು ಮತ್ತು ಮೇಕೆ ಮಾಂಸವನ್ನು ಅರ್ಪಿಸುವ ಸಂಪ್ರದಾಯವಿದ್ದು, ಬಳಿಕ ಭಕ್ತರು ಅದನ್ನು ಪ್ರಸಾದವಾಗಿ ಸ್ವೀಕರಿಸುತ್ತಾರೆ. ಹೀಗಾಗಿ ಬಂಗಾಳದ ಸ್ಥಳೀಯ ಧಾರ್ಮಿಕ ಆಚರಣೆ ಮತ್ತು ಆಹಾರ ಸಂಸ್ಕೃತಿಯ ಹಿನ್ನೆಲೆಯಲ್ಲಿ ಸುವೇಂದು ಅಧಿಕಾರಿ ಅವರ ಮೀನಿನ ಭೋಗ ಸೇವನೆ ಮಹತ್ವ ಪಡೆದುಕೊಂಡಿದೆ. 4ನೇ ಪುಟಕ್ಕೆ...

# ನಿವೃತ್ತಿ ಹೇಳಿಕೆ ಬೇಡ: ಸಿದ್ದುಗೆ ರಾಹುಲ್ ಫರ್ಮಾನು

**2028ರ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂಬ ರಾಜಕೀಯ ನಿವೃತ್ತಿ ಹೇಳಿಕೆಯನ್ನು ಪದೇಪದೇ ಸಾರ್ವಜನಿಕವಾಗಿ ನೀಡದಂತೆ ಸಿದ್ದರಾಮಯ್ಯ ಅವರಿಗೆ ರಾಹುಲ್ ಗಾಂಧಿ ಸಲಹೆ ನೀಡಿದ್ದಾರೆ ಎನ್ನಲಾಗಿದೆ. ಇದೇ ವೇಳೆ ಖಾಲಿ ಇರುವ ಎರಡು ಸಚಿವ ಸ್ಥಾನಗಳ ಭರ್ತಿ, ಜಾತಿ ಗಣತಿ ವರದಿ ಜಾರಿ ಹಾಗೂ ಅಹಿಂದ ವರ್ಗಗಳ ಹಿತಾಸಕ್ತಿ ಸೇರಿದಂತೆ ರಾಜ್ಯದ ಹಲವು ರಾಜಕೀಯ ವಿಚಾರಗಳ ಕುರಿತು ಸಿದ್ದರಾಮಯ್ಯ ಚರ್ಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.**

● ವಿಕ್ರಮ ವಾಹಿನಿ । ನವದೆಹಲಿ

2028ರ ವಿಧಾನಸಭೆ ಚುನಾವಣೆಯಲ್ಲಿ ತಾನು ಸ್ಪರ್ಧಿಸುವುದಿಲ್ಲ ಎಂಬ ರಾಜಕೀಯ ನಿವೃತ್ತಿ ಕುರಿತ ಹೇಳಿಕೆಯನ್ನು ಸಾರ್ವಜನಿಕವಾಗಿ ಪದೇಪದೇ ನೀಡದಂತೆ ಮಾಜಿ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯುಸಿ) ಸದಸ್ಯ ಸಿದ್ದರಾಮಯ್ಯ ಅವರಿಗೆ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸಲಹೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ದೆಹಲಿಯಲ್ಲಿ ಶುಕ್ರವಾರ ರಾಹುಲ್ ಗಾಂಧಿ ಅವರನ್ನು ಸಿದ್ದರಾಮಯ್ಯ ಭೇಟಿ ಮಾಡಿ ಕರ್ನಾಟಕದ ಪ್ರಸಕ್ತ ರಾಜಕೀಯ ಪರಿಸ್ಥಿತಿ, ಪಕ್ಷದ ಸಂಘಟನೆ ಹಾಗೂ ಸರ್ಕಾರಕ್ಕೆ ಸಂಬಂಧಿಸಿದ ಹಲವು ವಿಚಾರಗಳ ಕುರಿತು ಚರ್ಚಿಸಿದರು. ಈ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರ ರಾಜಕೀಯ ನಿವೃತ್ತಿ ಹೇಳಿಕೆಯೂ ಚರ್ಚೆಗೆ ಬಂದಿದೆ ಎನ್ನಲಾಗಿದೆ.

**ಪಕ್ಷಕ್ಕೆ ಹಿನ್ನಡೆಯಾಗುವ ಸಾಧ್ಯತೆ:**

ರಾಜಕೀಯ ನಿವೃತ್ತಿ ಕುರಿತು ಬಹಿರಂಗವಾಗಿ ಹೇಳಿಕೆ ನೀಡುವುದರಿಂದ ಪಕ್ಷದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗಬಹುದು. ಕಾಂಗ್ರೆಸ್‌ಗೆ ನಿಮ್ಮಂತಹ ಹಿರಿಯ ನಾಯಕರ ಅಗತ್ಯವಿದೆ. ಹೀಗಾಗಿ ಇಂತಹ ವಿಚಾರಗಳ ಬಗ್ಗೆ ಪದೇಪದೇ ಸಾರ್ವಜನಿಕ ಹೇಳಿಕೆ ನೀಡದಿರುವುದು ಸೂಕ್ತ ಎಂದು ರಾಹುಲ್ ಗಾಂಧಿ ಸಲಹೆ ನೀಡಿದ್ದಾರೆ ಎನ್ನಲಾಗಿದೆ. ಇತ್ತೀಚೆಗೆ ಸಿದ್ದರಾಮಯ್ಯ ಅವರು 2028ರ ವಿಧಾನಸಭೆ ಚುನಾವಣೆಯಲ್ಲಿ ತಾವು ಸ್ಪರ್ಧಿಸುವುದಿಲ್ಲ ಎಂದು ಹೇಳಿದ್ದರು. ಈ ಹೇಳಿಕೆ ರಾಜ್ಯ ಕಾಂಗ್ರೆಸ್‌ನಲ್ಲಿ ಹಾಗೂ ರಾಜಕೀಯ ವಲಯದಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿತ್ತು.

**ಎರಡು ಸಚಿವ ಸ್ಥಾನ ಭರ್ತಿಗೆ ಮನವಿ:**

ಸಭೆಯಲ್ಲಿ ರಾಜ್ಯ ಸಚಿವ ಸಂಪುಟದಲ್ಲಿ ಖಾಲಿ ಇರುವ ಎರಡು ಸಚಿವ ಸ್ಥಾನಗಳನ್ನು ಆದಷ್ಟು ಬೇಗ ಭರ್ತಿ ಮಾಡುವಂತೆ ಸಿದ್ದರಾಮಯ್ಯ ಅವರು ರಾಹುಲ್ ಗಾಂಧಿ ಅವರಲ್ಲಿ ಮನವಿ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪಕ್ಷದ ಸಂಘಟನೆ ಹಾಗೂ ಸರ್ಕಾರದ ಕಾರ್ಯವೈಖರಿಗೆ ಸಂಬಂಧಿಸಿದಂತೆ ಬಾಕಿ ಇರುವ ಕೆಲವು ರಾಜಕೀಯ ಮತ್ತು ಸಾಂಸ್ಥಿಕ ವಿಚಾರಗಳ ಬಗ್ಗೆಯೂ ಇಬ್ಬರು ನಾಯಕರು ಚರ್ಚಿಸಿದ್ದಾರೆ ಎನ್ನಲಾಗಿದೆ.



ರಾಜಕೀಯ ಹಾಗೂ ಸಾಂಸ್ಥಿಕ ಅವಕಾಶಗಳಿಗೆ ಸಂಬಂಧಿಸಿದ ನಿರ್ಧಾರಗಳನ್ನು ಕೈಗೊಳ್ಳುವಾಗ ಅಹಿಂದ ವರ್ಗಗಳ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಳ್ಳಬೇಕು ಎಂಬುದನ್ನೂ ಸಿದ್ದರಾಮಯ್ಯ ಒತ್ತಿಹೇಳಿದ್ದಾರೆ ಎಂದು ತಿಳಿದುಬಂದಿದೆ.

**ಜಾತಿ ಗಣತಿ ಜಾರಿಗೆ ಒತ್ತಾಯ:**

ಕರ್ನಾಟಕದಲ್ಲಿ ಜಾತಿ ಗಣತಿ ವರದಿಯನ್ನು ಶೀಘ್ರವಾಗಿ ಜಾರಿಗೊಳಿಸುವ ಅಗತ್ಯವಿದೆ ಎಂದು ಸಿದ್ದರಾಮಯ್ಯ ಅವರು ರಾಹುಲ್ ಗಾಂಧಿ ಅವರ ಗಮನಕ್ಕೆ ತಂದಿದ್ದಾರೆ ಎನ್ನಲಾಗಿದೆ. ವರದಿಯ ಶಿಫಾರಸುಗಳನ್ನು ಯಾವುದೇ ವಿಳಂಬವಿಲ್ಲದೆ ಅನುಷ್ಠಾನಗೊಳಿಸುವ ಮೂಲಕ ಸಾಮಾಜಿಕ ನ್ಯಾಯದ ಆಶಯವನ್ನು ಈಡೇರಿಸಬೇಕು ಎಂಬ ಅಭಿಪ್ರಾಯವನ್ನು ಅವರು ವ್ಯಕ್ತಪಡಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ರಾಹುಲ್ ಗಾಂಧಿ ಭೇಟಿಯ ಬಳಿಕ ಸಿದ್ದರಾಮಯ್ಯ ಅವರು ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಹಾಗೂ ಸಂಸದ ಕೆ.ಸಿ. ವೇಣುಗೋಪಾಲ್ ಅವರನ್ನು ಅವರ ನಿವಾಸದಲ್ಲಿ ಭೇಟಿಯಾಗುವ ಸಾಧ್ಯತೆ ಇದೆ.

ಸಿದ್ದರಾಮಯ್ಯ ಅವರೊಂದಿಗೆ ರಾಜ್ಯದ ರಾಜಕೀಯ ಬೆಳವಣಿಗೆಗಳು, ಪಕ್ಷದ ಮುಂದಿನ ಕಾರ್ಯತಂತ್ರ ಹಾಗೂ ಸಂಘಟನೆಯನ್ನು ಬಲಪಡಿಸುವ ಕುರಿತು ರಾಹುಲ್ ಗಾಂಧಿ ಚರ್ಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ | ಜನಪರ ದನಿ | ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ಸವಿ ವಾಹಿನಿ

ಸಂಪತ್ತು ಅಂತಸ್ತು ತಂದುಕೊಡಬಹುದು, ವಿದ್ಯೆ ಅರಿವು ನೀಡಬಹುದು. ಆದರೆ, ಗೌರವ ತಂದುಕೊಡುವುದು ಮಾತ್ರ ನಮ್ಮ ನಡತೆ.

## ದಿನ ಪಂಚಾಂಗ

ಸೆಪ್ಟಂಬರ್, 12-2026, ಶನಿವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ.
ಪಾಡ್ಯ ತಿಥಿ ಬೆ.7:46
ಉತ್ತರಾ ನಕ್ಷತ್ರ ಮ.2:06
ರಾಹುಕಾಲ ಬೆ 9:12-10:44
2ನೇ ಶನಿವಾರ, ಪೆರ್ನಾಳ್ ಆಚರಣೆ, ಸವಣೂರು | ಮಂತ್ರವಾಡಿ ರೇವಣಸಿದ್ಧೇಶ್ವರ ಜಲ ರಥ, ನರಗುಂದ | ಬನಹಟ್ಟಿ ಗುರುರುದ್ರದೇವ ರಥ, ನಲಗುಂದ | ಇಬ್ರಾಹಿಂಪುರ ಸಿದ್ದೇಶ್ವರ ರಥ, ಸವಣೂರು | ಮಂತ್ರವಾಡಿ ರೇವಣ್ಣ ಸಿದ್ದೇಶ್ವರ ರಥ, ಜಮಖಂಡಿ | ಕಡಪಟ್ಟಿ ಬಸವೇಶ್ವರ ಜಾತ್ರೆ, ನರಗುಂದ | ಹಡ್ಲಿ ಅಲ್ಲಮಪ್ರಭು ರಥ, ಅಕ್ಕಲಕೋಟೆ ಶಿವಶರಣರ ಜಾತ್ರೆ, ಚಂದ್ರದರ್ಶನ

## ಆಧ್ಯಾತ್ಮ

# ಅಭಿವೃದ್ಧಿಯ ಹೆಸರಿನಲ್ಲಿ ಜಲಮೂಲಗಳು ಹಾಗೂ ಪಾರಂಪರಿಕ ಸುವಸ್ತುಗಳ ವಿನಾಶ ಖೇದಕರ



● ವಿಕ್ರಮ ವಾಹಿನಿ | ಗೋಕರ್ಣ

ಧರ್ಮಶಾಸ್ತ್ರದಲ್ಲಿ ನೀರಿನ ಶುದ್ಧತೆಗೆ ವಿಶೇಷ ಒತ್ತನ್ನು ನೀಡಲಾಗಿದ್ದು, ನೀರಿಗೆ ಉಗುಳ ಬಾರದು ಎಂದು ಶಾಸ್ತ್ರ ಸೂಚಿಸುತ್ತದೆ. ಗಂಗೆಯಲ್ಲಿ ಆಚಮನ ಮಾಡಬಾರದು ಎಂಬ ನಿಯಮವೂ ಇದೆ. ನೀರನ್ನು ಮಲಿನ ಮಾಡುವವರಿಗೆ ನರಕಗಳನ್ನು ಹೇಳಲಾಗಿದೆ. ಧರ್ಮಶಾಸ್ತ್ರದ ಪಾಲನೆಯನ್ನು ದೇಶವು ಬಿಟ್ಟಿರುವುದರಿಂದ ದೇಶದ ಹಾಗೂ ನೀರಿನ ಪರಿಸ್ಥಿತಿ ದುಃಸ್ಥಿತಿಯನ್ನು ತಲುಪಿದೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 11.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ನೀರಿನ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಭರತನು 'ನಾನು ರಾಮನಿಗೆ ವಂಚನೆ ಮಾಡಿದ್ದರೆ ನೀರನ್ನು ಮಲಿನ ಮಾಡಿದರೆ ಸಿಗುವ ನರಕವು ಸಿಗಲಿ' ಎಂದು ರಾಮಾಯಣದಲ್ಲಿ ಶಪಥವನ್ನು ಮಾಡುತ್ತಾನೆ. ಇದು ಜಲ ಮೂಲಗಳ ಕುರಿತಾಗಿ ನಮ್ಮ ಪೂರ್ವಜರಿಗಿದ್ದ ಗೌರವವನ್ನು ಸೂಚಿಸುತ್ತದೆ ಎಂದು ಪ್ರಾಚೀನ ಭಾರತದಲ್ಲಿ ನೀರಿಗೆ ನೀಡಿದ್ದ ಮಹತ್ವವನ್ನು ವಿವರಿಸಿದರು.

ಆಯುರ್ವೇದದಲ್ಲಿ ಚಂದ್ರಕಾಂತ ಮಣಿಯ ನೀರು ಬಳಕೆಗೆ ಒಳ್ಳೆಯದು ಎನ್ನಲಾಗಿದೆ. ಆದರೆ ಇಂದು ಚಂದ್ರಕಾಂತ ಮಣಿಯ ಲಭ್ಯತೆಯೇ ಕಷ್ಟಕರವಾಗಿದೆ. ನಮ್ಮ ಶಾಸ್ತ್ರಗಳಲ್ಲಿ ಸೂಚಿಸಿರುವ ಎಲ್ಲಾ ಸುವಸ್ತುಗಳು ಇಂದು ಕಣ್ಮರೆಯಾಗುತ್ತಿವೆ. ಸುವಸ್ತುಗಳನ್ನು ನಾವು ಬಳಸದೇ ಇದ್ದರೆ ಅವು ಕಣ್ಮರೆಯಾಗುತ್ತದೆ ಎಂದು ಪರಂಪರೆ ಹೇಳುತ್ತದೆ.

ಹಾಗಾಗಿ ನಮ್ಮ ಪಾರಂಪರಿಕ ಗ್ರಂಥಗಳಲ್ಲಿ ಹೆಸರಿಸಿರುವ ಅನೇಕ ಸುವಸ್ತುಗಳು ಇಂದು ನಮಗೆ ಕಾಣಸಿಗುವುದಿಲ್ಲ. ಹಾಗೆಯೆ ಇನ್ನು ಕೆಲವನ್ನು ನಾವೇನಾವಾಗಿ ಅಭಿವೃದ್ಧಿಯ ಹೆಸರಿನಲ್ಲಿ ದುರಾಕ್ರಮಣಗಳ ಮೂಲಕ ಹಾಳುಮಾಡುತ್ತಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಮುಖರಾದ ಡಾ. ಕಲ್ಲಡ್ಕ ಪ್ರಭಾಕರ್ ಭಟ್ ದಂಪತಿಗಳು, ಉದ್ಯಮಿ ಆನಂದ್, ಹೈದರಾಬಾದಿನ ರಾಘವಲು, ಧಾರವಾಡದ ಸಿದ್ಧ ಸಮಾಧಿ ಯೋಗ ಸಮಾಜದ ಸದಸ್ಯರು ಶ್ರೀಗಳ ಆಶೀರ್ವಾದ ಪಡೆದರು. ಶೇಷಗಿರಿ ಹೆಬ್ಬಾರ್ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ದಿನಪ್ರಧಾನರಾಗಿ ಗುರುಪ್ರಕಾಶ ಹೆಗಡೆ ಕೂಜಳ್ಳಿ ದಂಪತಿಗಳು ಉಪಸ್ಥಿತರಿದ್ದರು.

ಸಿದ್ಧಿ ಸಮಾಜದಿಂದ ಸ್ವರ್ಣಪಾದುಕಾ ಪೂಜೆ: ಶ್ರೀರಾಮಚಂದ್ರಾಪುರ ಮಠಕ್ಕೆ ಪಾರಂಪರಿಕವಾಗಿ ನಡೆದುಕೊಳ್ಳುವ ಸಿದ್ದಿ ಸಮಾಜದಿಂದ ಸ್ವರ್ಣಪಾದುಕಾ ಪೂಜೆ ನಡೆಸಿದರು. ಪಾದುಕಾ ಪೂಜೆಯನ್ನು ಸ್ವೀಕರಿಸಿ ಮಾತನಾಡಿದ ಶ್ರೀಗಳು, ಸಿದ್ದಿ ಸಮಾಜದ ಜೊತೆಗೆ ಶ್ರೀಮಠ ಇರಲಿದ್ದು, ಗುರು ಪರಂಪರೆಯ ಅನುಗ್ರಹದಿಂದ ಸಮಾಜದ ಕಷ್ಟಗಳು ಕರಗಲಿ ಎಂದು ಆಶೀರ್ವದಿಸಿದರು. ಶಿವಾನಂದ ಸಿದ್ದಿ, ನರಸಿಂಹ ಸಿದ್ದಿ, ಕೃಷ್ಣ ಸಿದ್ದಿ, ನಾರಾಯಣ ಸಿದ್ದಿ ಸೇರಿದಂತೆ ಸಮಾಜದ ಪ್ರಮುಖರು, ಗುರುಬಂಧುಗಳು ಉಪಸ್ಥಿತರಿದ್ದರು.

# ಜೆಜೆಎಂ ಕಾಮಗಾರಿ ವಿಳಂಬ: ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ

● ವಿಕ್ರಮ ವಾಹಿನಿ | ಬೆಂಗಳೂರು

ಜಲ ಜೀವನ ಅಭಿಯಾನ (ಜೆಜೆಎಂ) ಅಡಿಯಲ್ಲಿ ಕೈಗೆತ್ತಿಕೊಂಡಿರುವ ಏಕಗ್ರಾಮ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿ ನಿಗದಿತ ಅವಧಿ ಮುಗಿದರೂ ಪೂರ್ಣಗೊಳ್ಳದಿರುವುದಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು, ವಿಳಂಬ ಮಾಡುವ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೆಂಗಳೂರಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಯುಕ್ತಾಲಯದಲ್ಲಿ ಗುರುವಾರ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಬಾಕಿ ಉಳಿದಿರುವ ಎಲ್ಲ ಕಾಮಗಾರಿಗಳನ್ನು ಮುಂದಿನ ವರ್ಷದ ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು. ಗುತ್ತಿಗೆದಾರರಿಂದ ಈ ಕುರಿತು ಮುಚ್ಚಳಿಕೆ ಪಡೆಯಬೇಕು ಎಂದು ಸೂಚಿಸಿದರು.

ಏಕಗ್ರಾಮ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಗೆ ಒಟ್ಟಾರೆ 67 ಸಾವಿರ ಕೋಟಿ ವೆಚ್ಚ ಮಾಡಲಾಗುತ್ತಿದ್ದು, ಸುಮಾರು 39 ಸಾವಿರ ಏಕಗ್ರಾಮ ಯೋಜನೆಗಳು ಹಾಗೂ 130ಕ್ಕೂ ಅಧಿಕ ಬಹುಗ್ರಾಮ ಯೋಜನೆಗಳು ಅನುಷ್ಠಾನದಲ್ಲಿವೆ. ಕಾಮಗಾರಿ ವಿಳಂಬದಿಂದ ಯೋಜನೆಯ ಮೂಲ ಉದ್ದೇಶವೇ ವಿಫಲವಾಗಲಿದೆ ಎಂದು ಖಂಡ್ರೆ ಬೇಸರ ವ್ಯಕ್ತಪಡಿಸಿದರು.

### ಗುತ್ತಿಗೆ ರದ್ದುಪಡಿಸಲು ಸೂಚನೆ

ಅವಧಿ ಮುಗಿದರೂ ಕಾಮಗಾರಿ ಪೂರ್ಣಗೊಳಿಸದ ಗುತ್ತಿಗೆದಾರರಿಗೆ ಅಂತಿಮ ನೋಟಿಸ್ ನೀಡಿ, ನಿಗದಿತ ಅವಧಿಯಲ್ಲಿ ಕಾಮಗಾರಿ ಮುಗಿಸುವಂತೆ ಸೂಚಿಸಬೇಕು. ವಿಫಲರಾದರೆ ನಿಯಮಾನುಸಾರ ಕ್ರಮ ಕೈಗೊಂಡು, ಅಗತ್ಯವಿದ್ದಲ್ಲಿ ಗುತ್ತಿಗೆ ರದ್ದುಪಡಿಸಿ ಬೇರೆಯವರಿಗೆ ಕಾಮಗಾರಿ ವಹಿಸಬೇಕು ಎಂದು ನಿರ್ದೇಶನ ನೀಡಿದರು.



"ಜಲ ಜೀವನ ಅಭಿಯಾನದಡಿ ಕೈಗೆತ್ತಿಕೊಂಡಿರುವ ಯಾವುದೇ ಕಾಮಗಾರಿಯೂ ಅನಗತ್ಯವಾಗಿ ವಿಳಂಬವಾಗಬಾರದು. ಬಾಕಿ ಇರುವ ಎಲ್ಲ ಕಾಮಗಾರಿಗಳನ್ನು ಮುಂದಿನ ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸುವುದು ಕಡ್ಡಾಯ. ಗಡುವು ಮೀರಿ ಕಾಮಗಾರಿ ಪೂರ್ಣಗೊಳಿಸದ ಗುತ್ತಿಗೆದಾರರಿಗೆ ಅಂತಿಮ ನೋಟಿಸ್ ನೀಡಿ, ಅಗತ್ಯವಿದ್ದರೆ ಗುತ್ತಿಗೆ ರದ್ದುಪಡಿಸಿ ಬೇರೆಯವರಿಗೆ ಕಾಮಗಾರಿ ವಹಿಸಬೇಕು. ಕುಡಿಯುವ ನೀರಿನ ಯೋಜನೆಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ. ಕಳಪೆ ಕಾಮಗಾರಿ ಕಂಡುಬಂದರೆ ಗುತ್ತಿಗೆದಾರರ ಜೊತೆಗೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧವೂ ಕ್ರಮ ಕೈಗೊಳ್ಳಲಾಗುವುದು."
–ಈಶ್ವರ ಬಿ. ಖಂಡ್ರೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಅಧಿಕಾರಿಗಳು ಮತ್ತು ಎಂಜಿನಿಯರ್‌ಗಳು ತಮ್ಮ ವ್ಯಾಪ್ತಿಯ ಕಾಮಗಾರಿಗಳ ಪ್ರಗತಿಯನ್ನು ವಾರಕ್ಕೊಮ್ಮೆಯಾದರೂ ಸ್ಥಳಕ್ಕೆ ತೆರಳಿ ಪರಿಶೀಲಿಸಬೇಕು. ವಿಳಂಬ ಕಂಡುಬಂದ ಕೂಡಲೇ ಕ್ರಮ ಕೈಗೊಳ್ಳಬೇಕು. ಕರ್ತವ್ಯಲೋಪ ಕಂಡುಬಂದರೆ ಸಂಬಂಧಪಟ್ಟ ಎಂಜಿನಿಯರ್‌ಗಳ ವಿರುದ್ಧವೂ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು.

### ಗುಣಮಟ್ಟದಲ್ಲಿ ರಾಜಿ ಇಲ್ಲ

ಕುಡಿಯುವ ನೀರಿನ ಯೋಜನೆಗಳ ಕಾಮಗಾರಿಯಲ್ಲಿ ಯಾವುದೇ ಕಾರಣಕ್ಕೂ ಗುಣಮಟ್ಟದಲ್ಲಿ ರಾಜಿ ಮಾಡಿಕೊಳ್ಳಬಾರದು. ಕಳಪೆ ಕಾಮಗಾರಿ ಕುರಿತು ದೂರು ಬಂದರೆ ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥ ಗುತ್ತಿಗೆದಾರರಷ್ಟೇ ಅಲ್ಲದೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧವೂ ಕ್ರಮ ಕೈಗೊಳ್ಳಬೇಕು ಎಂದು ಖಂಡ್ರೆ ಸೂಚಿಸಿದರು.

ಅರಣ್ಯಭೂಮಿ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಮೂಲಕ ಕೊಳವೆ ಮಾರ್ಗ ಅಳವಡಿಸುವಂತಹ ತಾಂತ್ರಿಕ ಅಥವಾ ಅನುಮತಿ ಸಂಬಂಧಿತ ಸಮಸ್ಯೆಗಳಿಂದ ಕೆಲ ಕಾಮಗಾರಿಗಳು ವಿಳಂಬವಾಗುತ್ತಿವೆ. ಇಂತಹ ಸಮಸ್ಯೆಗಳನ್ನು ಪರಿಹರಿಸಲು ಪ್ರತ್ಯೇಕ ಸಭೆ ನಡೆಸಲಾಗುವುದು. ಆದರೆ ಅನಗತ್ಯ ವಿಳಂಬವನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಕೇಂದ್ರ ಸರ್ಕಾರದ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸದಿದ್ದರೆ ರಾಜ್ಯದ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆಯಿದೆ. ಹೀಗಾಗಿ ನಿಗದಿತ ಗಡುವಿನೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ, ಗುತ್ತಿಗೆದಾರರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ವಿವಿಧ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಪಾಲ್ಗೊಂಡಿದ್ದರು.

# ವೈದ್ಯಕೀಯದಲ್ಲಿ 384 ಸೀಟು ಉಳಿಕೆ, ದಂತ ವೈದ್ಯಕೀಯ ಎಲ್ಲ ಸೀಟು ಹಂಚಿಕೆ

● ವಿಕ್ರಮ ವಾಹಿನಿ | ಬೆಂಗಳೂರು

ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್ ಗಳ ಪ್ರವೇಶಕ್ಕೆ ಎರಡನೇ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇಂದು ಪ್ರಕಟಿಸಿದೆ.

ಎಂಸಿಸಿ ಮತ್ತು ಕೆಇಎ – ಎರಡೂ ಕೌನ್ಸೆಲಿಂಗ್ ಗಳಲ್ಲಿ ಸೀಟು ಹಂಚಿಕೆಯಾಗಿರುವ ಅಭ್ಯರ್ಥಿಗಳಿಗೆ ಒಂದು ವೇಳೆ ಎಂಸಿಸಿ ಸೀಟಿಗೆ ಪ್ರವೇಶ ಪಡೆಯಲು ಇಚ್ಛಿಸಿದಲ್ಲಿ ಅಂತಹವರು ಸೆ.14ರ ಸಂಜೆ 5ಗಂಟೆವರೆಗೆ ಚಾಯ್ಸ್– 4 ಆಯ್ಕೆ ಮಾಡಿಕೊಂಡು ಕೆಇಎಯಿಂದ ಹೊರ ಹೋಗುವುದಕ್ಕೆ ಅವಕಾಶ ನೀಡಲಾಗಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಈ ರೀತಿ ಚಾಯ್ಸ್–4 ಹಾಕಿ ಹೊರ ಹೋಗುವ ಅಭ್ಯರ್ಥಿಗಳಿಂದ ತೆರವಾಗುವ ಸೀಟುಗಳನ್ನು 2ನೇ ಸುತ್ತಿಗೇ ಪರಿಗಣಿಸಿ, ಮತ್ತೊಮ್ಮೆ ಸೀಟು ಹಂಚಿಕೆ (Re-Run) ಮಾಡಿ ಅಂತಿಮ ಫಲಿತಾಂಶ ಪ್ರಕಟಿಸಲಾಗುವುದು ಎಂದು ಅವರು ವಿವರಿಸಿದ್ದಾರೆ.

ವೈದ್ಯಕೀಯ ಕೋರ್ಸ್ ನಲ್ಲಿ ಒಟ್ಟು 12,010 ಸೀಟುಗಳ ಪೈಕಿ 11,626 ಸೀಟು ಹಂಚಿಕೆಯಾಗಿವೆ. ಮ್ಯಾನೇಜ್ಮೆಂಟ್ ಕೋಟಾದ ಇನ್ನೂ 384 ಸೀಟು ಬಾಕಿ ಉಳಿದಿವೆ. ಆದರೆ ದಂತ ವೈದ್ಯಕೀಯ ಕೋರ್ಸ್ ನಲ್ಲಿ ಎಲ್ಲ 2,689 ಸೀಟುಗಳೂ ಹಂಚಿಕೆಯಾಗಿವೆ ಎಂದು ಅವರು ತಿಳಿಸಿದ್ದಾರೆ.

# 20 ರಂದು ಪ್ರೊ.ಎ.ಬಿ.ಹಿರೇಮಠ ಅವರ 'ಕರ್ತವ್ಯಶೀಲ' ಅಭಿನಂದನ ಗ್ರಂಥ ಬಿಡುಗಡೆ

● ವಿಕ್ರಮ ವಾಹಿನಿ | ಗದಗ

ಜಿಲ್ಲೆಯ ಮುಂಡರಗಿಯಲ್ಲಿರುವ ಶ್ರೀ ಜಗದ್ಗುರು ಅನ್ನದಾನೀಶ್ವರ ಕಲ್ಯಾಣ ಮಂಟಪದಲ್ಲಿ ಇದೇ ಸೆಪ್ಟೆಂಬರ್ 20 ರಂದು ಕೆ.ಆರ್.ಬೆಲ್ಲದ್ ಕಾಲೇಜಿನ ಪ್ರಾಚಾರ್ಯರಾಗಿದ್ದ ಎ.ಬಿ.ಹಿರೇಮಠ ಅವರ 85ನೇ ಜನ್ಮದಿನೋತ್ಸವ ಹಾಗೂ 'ಕರ್ತವ್ಯ ಶೀಲ' ಅಭಿನಂದನ ಗ್ರಂಥ ಬಿಡುಗಡೆ ಸಮಾರಂಭ ಆಯೋಜಿಸಲಾಗಿದೆ.

ಮುಂಡರಗಿಯ ಪ್ರಾಚಾರ್ಯ ಎ.ಬಿ.ಹಿರೇಮಠ ಅಭಿನಂದನ ಸಮಿತಿ ಇವರು ಆಯೋಜಿಸಿರುವ ಸಮಾರಂಭ ಬೆಳಿಗ್ಗೆ 10 ಗಂಟೆಯಿಂದ ಆರಂಭವಾಗಲಿದ್ದು, ದಿವ್ಯ ಸಾನಿಧ್ಯವನ್ನು ಮುಂಡರಗಿಯ ಶ್ರೀ ಜಗದ್ಗುರು ಅನ್ನದಾನೇಶ್ವರ ಸಂಸ್ಥಾನ ಮಠದ ಪರಮ ಪೂಜ್ಯ ಶ್ರೀ ಮ.ನಿ.ಪ್ರ. ಜಗದ್ಗುರು ನಾಡೋಜ ಡಾ. ಅನ್ನದಾನೀಶ್ವರ ಮಹಾಶಿವಯೋಗಿಗಳು ವಹಿಸಲಿದ್ದಾರೆ. ಶಿರಹಟ್ಟಿ–ಬಾಳೆಹೊಸೂರು ಸಂಸ್ಥಾನಮಠದ ಶ್ರೀ ಮ.ನಿ.ಪ್ರ.ಜಗದ್ಗುರು ಫಕೀರದಿಂಗಾಲೇಶ್ವರ ಮಹಾಸ್ವಾಮಿಗಳ ಸಮ್ಮುಖದಲ್ಲಿ, ಮುಂಡರಗಿಯ ಶ್ರೀ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನಮಠದ ಉತ್ತರಾಧಿಕಾರಿಗಳಾದ ಶ್ರೀ ಮ.ನಿ.ಪ್ರ. ಡಾ.ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಸೇಗುಣಸಿ –ಬೆಳಗಾವಿ ವಿರಕ್ತಮಠದ ಶ್ರೀ ಮ.ನಿ.ಪ್ರ. ಮಹಾಂತಪ್ರಭು ಸ್ವಾಮಿಗಳು ಮತ್ತು ಹತ್ತಿಮತ್ತೂರು–ಕರ್ಜಗಿ ವಿರಕ್ತಮಠದ ಶ್ರೀ ಮ.ನಿ.ಪ್ರ. ನಿಜಗುಣ ಶಿವಯೋಗಿಗಳು ನೇತೃತ್ವ ವಹಿಸಲಿದ್ದಾರೆ.

ಕರ್ನಾಟಕ ಸರ್ಕಾರದ ಮಾಜಿ ಸಹಕಾರ ಸಚಿವರಾದ ಎಸ್.ಎಸ್.ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ನಡೆವ ಸಮಾರಂಭವನ್ನು ವಿಧಾನ ಪರಿಷತ್ ಮಾಜಿ ಸಭಾಪತಿ ಬಸವರಾಜ ಹೊರಟ್ಟಿ ಅವರು ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರು ಅವರು ಗ್ರಂಥ ಲೋಕಾರ್ಪಣೆ ಮಾಡಲಿದ್ದಾರೆ. ಮುಂಡರಗಿಯ ವಿಶ್ರಾಂತ ಪ್ರಾಚಾರ್ಯರಾದ ಪ್ರೊ. ಎಸ್. ಬಿ. ಕರಿಭರಮಗೌಡರ ಗ್ರಂಥ ಸಂಪಾದಕೀಯ ನುಡಿಗಳನ್ನಾಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕರಾದ ಡಾ. ರಹಮತ್ ತರೀಕೆರೆ, ವಿಜಯಪುರ ಅಕ್ಕಮಹಾದೇವಿ ವಿಶ್ವವಿದ್ಯಾಲಯ ಮೌಲ್ಯ ಮಾಪನ ಕುಲಸಚಿವರಾದ ಡಾ. ಬಿ. ಎಲ್. ಲಕ್ಕಣ್ಣವರ, ಧಾರವಾಡದ ಪ್ರೊ. ಬಿ. ಎಸ್. ಶಿರೋಳ, ನರೇಗಲ್ ನ ವಿಶ್ರಾಂತ ಪ್ರಾಚಾರ್ಯ ಪ್ರೊ. ಬಿ. ಎಫ್. ಚೇಗರಡ್ಡಿ ಅವರು ಪಾಲ್ಗೊಳ್ಳಲಿದ್ದಾರೆ. ಹಿರೇಕೇರೂರಿನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪಿ. ಎಫ್. ದೊಡ್ಡಮನಿ, ಅಮೇರಿಕಾದ ಸಿಯಾಟೆಲ್ ನ ಅಕ್ಕಮಹಾದೇವಿ ಹಂಪಿಹೊಳಿ ಅವರು ತಮ್ಮ ಅನಿಸಿಕೆ ವ್ಯಕ್ತಪಡಿಸಲಿದ್ದಾರೆ.

ಕೊಪ್ಪಳದ ಡಾ. ಅಲ್ಲಮಪ್ರಭು ಬೆಟ್ಟದೂರು, ಹುಲಕೋಟಿಯ ಡಾ. ಅರ್ಜುನ ಗೊಳಸಂಗಿ, ಗಜೇಂದ್ರಗಡದ ಪ್ರೊ. ಬಿ. ಎ. ಕೆಂಚರಡ್ಡಿ, ಹುಬ್ಬಳ್ಳಿಯ ಡಾ. ಲಿಂಗರಾಜ ಅಂಗಡಿ, ಗದುಗಿನ ಪ್ರಾ. ಜಿ. ಬಿ. ಪಾಟೀಲ, ಪ್ರೊ. ಕೆ. ಎಚ್. ಬೇಲೂರ, ಪ್ರೊ. ಎನ್. ಎಂ. ಮುಲ್ಲಾ, ಜಯದೇವ ಮೆಣಸಗಿ, ಪ್ರೊ. ಸೋಮಶೇಖರ ಕನಕಾಚಲ, ವಿಜಯಪುರದ ಡಾ. ಎನ್. ಬಿ. ಪಾಟೀಲ, ಕೋಗನೂರಿನ ಎಚ್. ಎಸ್. ಕೆಂಗೊಂಡೆಪ್ಪನವರ, ಲಕ್ಷ್ಮೇಶ್ವರದ ಲಲಿತಮ್ಮ ಚ. ಕೆರಿಮನಿ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಮೇರುಗುರು ಪ್ರಾ.ಎ.ಬಿ.ಹಿರೇಮಠ ಅವರ ವಿದ್ಯಾರ್ಥಿಗಳಿಂದ ಗುರುವಂದನೆ ಹಾಗೂ ಅನಿಸಿಕೆ ವ್ಯಕ್ತವಾಗಲಿದ್ದು ಮುಂಡರಗಿಯ ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ನಾಗೇಶ ಹುಬ್ಬಳ್ಳಿ, ಹುಬ್ಬಳ್ಳಿಯ ಹಿರಿಯ ಸಿವಿಲ್ ನ್ಯಾಯಾಧೀಶರಾದ ಯಮನಪ್ಪ ಕೆ., ಕೊಪ್ಪಳದ ಡಿವೈಎಸ್‌ಪಿ ವಿ.ಎಚ್.ನಾಯಕ್, ವಕೀಲರಾದ ಎಸ್.ಎಚ್.ಸುರಪುರ, ಬಳ್ಳಾರಿ ಗುಪ್ತಚರ ವಾರ್ತೆ ಅಧೀಕ್ಷಕರಾದ ಎಸ್.ಎಚ್.ತಳವಾರ, ಬೆಂಗಳೂರು ಸಿಐಡಿ ವಿಭಾಗದ ಡಿವೈಎಸ್‌ಪಿ ಮಹೇಶ್ವರಗೌಡ, ಹೊಸಪೇಟೆಯ ಪ್ರಾಚಾರ್ಯರಾದ ಅನಸೂಯ ಅಂಗಡಿ, ಅಳವಂಡಿಯ ಪ್ರಾಚಾರ್ಯರಾದ ಡಾ.ನಾಗರಾಜ ಹಾವಿನಾಳ, ಬೆಳಗಾವಿಯ ಬಸವರಾಜ ಗಾರ್ಗಿ, ಬೆಂಗಳೂರಿನ ಶಾಂತಕುಮಾರ ಪೂಜಾರ, ಹರಪನಹಳ್ಳಿಯ ನಿವೃತ್ತ ಪ್ರಾಚಾರ್ಯ ಗಂಗಪ್ಪ, ಪೇತಾಲೂರು ಪ್ರಾಚಾರ್ಯರಾದ ಎಸ್. ವೈ.ಬೀಳಗಿ, ಹಿರೇವಡ್ಡಟ್ಟಿಯ ಪ್ರಾಚಾರ್ಯರಾದ ಹನುಮಂತಪ್ಪ ಬಿ.ಪೂಜಾರ, ಕಾರಟಗಿಯ ಅಧ್ಯಾಪಕರಾದ ಕಳಕೇಶ ಗುಡ್ಲಾನೂರು, ಬಾಗಲಕೋಟೆಯ ಪ್ರಾಧ್ಯಾಪಕರಾದ ಡಾ.ಪ್ರದೀಪ್ ಜೋಶಿ, ಗಂಗಾವತಿಯ ಎಲ್.ಐ.ಸಿ.ಅಧಿಕಾರಿ ಆರ್ ವೈ ಕುರಿ, ಬೆಳ್ಳಟ್ಟಿಯ ಆರ್.ಆರ್. ಗಡ್ಡದೇವರಮಠ, ಮುಂಡರಗಿಯ ಪ್ರೊ.ಎಸ್. ಎಂ.ಹೊಸಮಠ, ಎಲ್ಲಪ್ಪ ಕರಡಿ, ಸಹಾಯಕ ನಿರ್ದೇಶಕರಾದ ಉದಯಕುಮಾರ ಯಲಿವಾಳ, ಹಿರಿಯ ವಿದ್ಯಾರ್ಥಿಗಳ ಸಂಘದ ಕಾರ್ಯದರ್ಶಿ ವೀರೇಶ ಸಜ್ಜನ, ಅಳವಂಡಿಯ ಡಾ.ಸಂಗಯ್ಯ ಶಿರೂರುಮಠ, ಗದುಗಿನ ಪ್ರಾಚಾರ್ಯರಾದ ಡಾ.ಬಿ.ಬಿ.ಹೊಳಗುಂದಿ, ಗಿಣಗೇರಿಯ ಪ್ರಾಚಾರ್ಯರಾದ ವೀರೇಶ ಕಾತರಕಿ, ಕೊಪ್ಪಳ ಲೋಕೋಪಯೋಗಿ ಇಲಾಖೆಯ ಮಲ್ಲಾರಾವ್ ಕುಲಕರ್ಣಿ, ದಾವಣಗೆರೆಯ ಉಪನ್ಯಾಸಕರಾದ ಪ್ರೊ.ಎಚ್.ಎಸ್.ಚವಟಗಿ, ಕೊಪ್ಪಳದ ವೆಂಕಟೇಶ್ ಬೋಗಾಪುರ ಇವರು ಮಾತನಾಡಲಿದ್ದಾರೆ.

## ಶಿಕ್ಷಣ, ಸಾಹಿತ್ಯ ಸೇವೆಯ ಸಾರ್ಥಕ ಪಯಣ

ಅವಿಭಜಿತ ಧಾರವಾಡ ಜಿಲ್ಲೆಯ ಶಿರಹಟ್ಟಿ ತಾಲೂಕಿನ ಬಿಜೂರು ಗ್ರಾಮದವರಾದ ಅನ್ನದಾನಯ್ಯ ಬಸಯ್ಯ ಹಿರೇಮಠ ಇವರು ಪ್ರಾಚಾರ್ಯ ಎ. ಬಿ. ಹಿರೇಮಠ ಎಂದೇ ಚಿರಪರಿಚಿತರು. ಇವರ ಚಿಕ್ಕಪ್ಪ ವೀರಯ್ಯನವರು ಸ್ವಾತಂತ್ರ್ಯ ಹೋರಾಟಗಾರ ಮೈಲಾರ ಮಹಾದೇವರೊಂದಿಗೆ ಹಾವೇರಿ ಜಿಲ್ಲೆಯ ಹೊಸರಿತ್ತಿಯ ಗೋಲಿಬಾರಿನಲ್ಲಿ ವೀರಮರಣ ಹೊಂದಿದವರು.



ಇವರದು ಸ್ವಾತಂತ್ರ್ಯ ಹೋರಾಟಗಾರರ ಹಿನ್ನೆಲೆ ಇರುವ ಕುಟುಂಬ. ಹಾಗಾಗಿ ಆ ಹೋರಾಟದ ಮನೋಭಾವ ಅವರಲ್ಲಿ ಸ್ಥಾಯಿಯಾಗಿರುವುದನ್ನು ಕಾಣಬಹುದು. ಕ್ರಿ.ಶ.1941 ರಲ್ಲಿ ಜನಿಸಿದ ಇವರು ಕೋಗನೂರಿನಲ್ಲಿ 5ನೇ ತರಗತಿವರೆಗೆ, 6 ಮತ್ತು 7ನೇ ತರಗತಿವರೆಗೆ ಮುಂಡರಗಿಯ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ, 8 ಮತ್ತು 9ನೇ ತರಗತಿಗಳನ್ನು ಅನ್ನದಾನೀಶ್ವರ ಪ್ರೌಢಶಾಲೆಯಲ್ಲಿ ಓದಿದರು. 10 ಮತ್ತು 11ನೇ ತರಗತಿಯನ್ನು ಶಿರಹಟ್ಟಿಯಲ್ಲಿ ಪಡೆದುಕೊಂಡರು. ಮುಂದೆ ಧಾರವಾಡದ ಮುರುಘಾಮಠದಲ್ಲಿದ್ದು ಪೂಜ್ಯ ಮೃತ್ಯುಂಜಯ ಹಾಗೂ ಮಹಾಂತಪ್ಪಗಳ ಸಾನಿಧ್ಯದಲ್ಲಿ ಕರ್ನಾಟಕ ಕಾಲೇಜಿನಲ್ಲಿ ಬಿ.ಎ ಪದವಿಯನ್ನು, ಕರ್ನಾಟಕ ವಿಶ್ವವಿದ್ಯಾಲಯದಿಂದ ಎಂ.ಎ ರಾಜ್ಯಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ.

1967–68 ರಲ್ಲಿ ಹಾನಗಲ್ಲಿನ ಹೈಯರ್ ಸೆಕೆಂಡರಿ ಶಾಲೆಯಲ್ಲಿ ಮತ್ತು ಮರು ವರ್ಷವೇ ಬೈಲಹೊಂಗಲದ ಕಿತ್ತೂರ ರಾಣಿ ಚೆನ್ನಮ್ಮ ಎಜುಕೇಶನಲ್ ಸೊಸೈಟಿಯಲ್ಲಿ ಒಂದು ವರ್ಷ, ಮೂರು ವರ್ಷ ಚಿಕ್ಕೋಡಿಯಲ್ಲಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸಿದರು. 1970ರಲ್ಲಿ ಮೇ 17 ರಂದು ಹುಬ್ಬಳ್ಳಿಯ ಅನ್ನಪೂರ್ಣಾದೇವಿಯವರನ್ನು ಕೈಹಿಡಿದ ಇವರಿಗೆ, ಮಗಳು ರೇಖಾ ಹಾಗೂ ಮಗ ವೀರೇಂದ್ರ ಕುಮಾರ್ ಜನಿಸಿದರು. ಮಗಳು ಸದ್ಯ ಆಸ್ಟ್ರೇಲಿಯಾದಲ್ಲಿ ಅಧ್ಯಾಪಕಿಯಾಗಿ, ಮಗ ವೈದ್ಯರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಲ್ಲದೆ, ಎ. ಬಿ. ಹಿರೇಮಠ ಅವರು ಪೂಜ್ಯ ಅನ್ನದಾನೀಶ್ವರರ ಕೃಪಾಶೀರ್ವಾದದಿಂದ 1977ರಲ್ಲಿ ಅನ್ನದಾನಿಶ್ವರ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ನಂತರ ಆಗಸ್ಟ್ 11 1980 ರಲ್ಲಿ ಆರಂಭವಾದ ಕ.ರಾ. ಬೆಲ್ಲದ ಮಹಾವಿದ್ಯಾಲಯದ ಪ್ರಾಧ್ಯಾಪಕರಾಗಿ, ಪ್ರಾಚಾರ್ಯರಾಗಿ, ಮೂರು ದಶಕಗಳ ಕಾಲ ಸೇವೆ ಸಲ್ಲಿಸಿದ್ದಾರೆ. ರಾಜ್ಯ ಹಾಗೂ ರಾಷ್ಟ್ರಮಟ್ಟದ ವಿಚಾರ ಸಂಕಿರಣಗಳನ್ನು ಏರ್ಪಡಿಸಿದ್ದಾರೆ.

ಕನ್ನಡ ಸಂಘ ಸ್ಥಾಪನೆ ಮಾಡಿ ಅದರ ಅಡಿಯಲ್ಲಿ 16 ಕೃತಿಗಳನ್ನು ಪ್ರಕಟಿಸಿದರು. ಮೈಲಾರ ಮಹಾದೇವ ಇವರ ಸ್ವತಂತ್ರ ಕೃತಿ. ಅಲ್ಲದೆ ಶಾಲಾ ದಿನಗಳಲ್ಲಿ ಸ್ವತಃ ನಾಟಕಗಳಲ್ಲಿ ಅಭಿನಯಿಸಿ ಪ್ರೇಕ್ಷಕರಿಂದ ಮೆಚ್ಚುಗೆ ಪಡೆದಂತವರು. ಅಲ್ಲದೆ ಕಾರ್ಲ್ ಮಾರ್ಕ್ಸ್ ಶತಮಾನೋತ್ಸವ ಕುರಿತು ವಿಚಾರ ಸಂಕಿರಣ, 1999 ರಲ್ಲಿ ಎರಡನೆಯ ರಾಜ್ಯ ಬಂಡಾಯ ಸಾಹಿತ್ಯ ಸಮ್ಮೇಳನ, ಕರ್ನಾಟಕ ಜಾನಪದ ಸಾಹಿತ್ಯ ಸಮ್ಮೇಳನ ಏರ್ಪಡಿಸಿದ್ದರು. ಮಹಾವಿದ್ಯಾಲಯದಲ್ಲಿ ಎನ್.ಸಿ.ಸಿ., ಎನ್. ಎಸ್. ಎಸ್. ಘಟಕಗಳ ಸ್ಥಾಪನೆ ಮಾಡಿದರು. ಈ ಮುಖೇನ ವಿಶ್ವವಿದ್ಯಾಲಯ ಮಟ್ಟದ ಕ್ಯಾಂಪುಗಳನ್ನು ಆಯೋಜಿಸಿದ್ದಾರೆ. ಜ. ಅ. ಸಮಿತಿಯ ಆಡಳಿತಾಧಿಕಾರಿಯಾಗಿ, ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರಿನ ಆಜೀವ ಸದಸ್ಯರಾಗಿ, ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರಾಗಿ, ಕಾರ್ಯದರ್ಶಿಯಾಗಿ, ಅಧ್ಯಕ್ಷರಾಗಿ, ಎರಡು ಗದಗ ಜಿಲ್ಲಾ ಸಮ್ಮೇಳನಗಳನ್ನು ಸಂಘಟಿಸಿದ್ದಾರೆ. ಅಲ್ಲದೆ ಇವರ ಸಂಘಟನಾ ಚತುರತೆಯ ಫಲವಾಗಿ 2010ರಲ್ಲಿ ಗೀತಾ ನಾಗಭೂಷಣ ಅವರ ಸರ್ವಾಧ್ಯಕ್ಷತೆಯಲ್ಲಿ ಗದಗ ಜಿಲ್ಲೆಯ ಪ್ರಪ್ರಥಮ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ನೆರವೇರಿತು. ಇಂಥ ಸಾಂಸ್ಕೃತಿಕ ನಾಯಕ, ಮಾರ್ಗ ಪ್ರವರ್ತಕ, ಮೇರು ಗುರುವಿಗೆ, ಅಭಿನಂದನ ಸಮಾರಂಭ ಏರ್ಪಡಿಸಿದ್ದು ಸರ್ವರೂ ಆಗಮಿಸಿ ಅಭಿನಂದನೆ ಹಾಗೂ ಗುರುವಂದನೆ ಸಲ್ಲಿಸಿ ಧನ್ಯರಾಗುವಂತೆ ಸ್ವಾಗತ ಸಮಿತಿಯ ಅಧ್ಯಕ್ಷರಾದ ಎಸ್.ಎಸ್.ಪಾಟೀಲ್, ಪದಾಧಿಕಾರಿಗಳಾದ ನಾಗೇಶ ಹುಬ್ಬಳ್ಳಿ, ಈಶ್ವರಪ್ಪ ಹಂಚಿನಾಳ, ಕೊಟ್ರೇಶ ಅಂಗಡಿ, ಡಾ.ಬಿ.ಜಿ.ಜವಳಿ, ಡಾ.ಡಿ.ಸಿ.ಮಠ ಮತ್ತು ಷಡಕ್ಷರಿ ಅಡವಯ್ಯನಮಠ, ಎಚ್.ಎ.ಗಾಯತ್ರಿದೇವಿ, ಡಾ.ಎಚ್.ಎ.ವೀರೇಂದ್ರಕುಮಾರ, ಶರಣಬಸವ ಹಿರೇಮಠ ಸಹೋದರ, ಸಹೋದರಿಯರು ತಿಳಿಸಿದ್ದಾರೆ.

# 800 ವರ್ಷಗಳ ಇತಿಹಾಸದ ಶರವು ಮಹಾಗಣಪತಿ ಕ್ಷೇತ್ರ

**ಸುಮಾರು 800 ವರ್ಷಗಳ ಇತಿಹಾಸ ಹೊಂದಿರುವ ಮಂಗಳೂರಿನ ಶರವು ಶ್ರೀ ಮಹಾಗಣಪತಿ ಕ್ಷೇತ್ರವು ದಶಭುಜ ಮಹಾಗಣಪತಿ ಆರಾಧನೆ, ವಿಶಿಷ್ಟ ಸ್ಥಳಪುರಾಣ ಹಾಗೂ ಪುರಾತನ ಪೂಜಾ ಪರಂಪರೆಯಿಂದ ಪ್ರಸಿದ್ಧವಾಗಿದೆ. ಸಿದ್ಧಿಲಕ್ಷ್ಮಿಯೊಂದಿಗೆ ಆರಾಧಿಸಲ್ಪಡುವ ಮಹಾಗಣಪತಿಯ ದರ್ಶನಕ್ಕಾಗಿ ನಾಡಿನ ವಿವಿಧೆಡೆಯಿಂದ ಭಕ್ತರು ಆಗಮಿಸುತ್ತಾರೆ.**

● ವಿಕ್ರಮ ವಾಹಿನಿ | ಮಂಗಳೂರು

*ಕರಾವಳಿಯ ಪ್ರಮುಖ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾಗಿರುವ ಮಂಗಳೂರಿನ ಶರವು ಶ್ರೀ ಮಹಾಗಣಪತಿ ದೇವಾಲಯವು ಸುಮಾರು 800 ವರ್ಷಗಳ ಪುರಾತನ ಇತಿಹಾಸ ಹಾಗೂ ವಿಶಿಷ್ಟ ಸ್ಥಳಪುರಾಣವನ್ನು ಹೊಂದಿದೆ. ಹಂಪನಕಟ್ಟೆಯ ವಾಣಿಜ್ಯ ಪ್ರದೇಶದ ನಡುವೆ ನೆಲೆಗೊಂಡಿರುವ ಈ ಕ್ಷೇತ್ರವು ಶೈವ ಮತ್ತು ಗಾಣಾಪತ್ಯ ಪರಂಪರೆಯ ಸಮ್ಮಿಲನದ ಪ್ರತೀಕವಾಗಿ ಭಕ್ತರನ್ನು ಆಕರ್ಷಿಸುತ್ತಿದೆ.*

*ಕ್ಷೇತ್ರದ ಪ್ರಮುಖ ಆಕರ್ಷಣೆ ಸಿದ್ಧಿಲಕ್ಷ್ಮಿಯೊಂದಿಗೆ ಆರಾಧಿಸಲ್ಪಡುವ ದಶಭುಜ ಮಹಾಗಣಪತಿ. ಹತ್ತು ಕೈಗಳನ್ನು ಹೊಂದಿರುವ ಈ ವಿಶಿಷ್ಟ ಗಣಪತಿ ವಿಗ್ರಹವು ಶರವು ಕ್ಷೇತ್ರಕ್ಕೆ ವಿಶೇಷ ಧಾರ್ಮಿಕ ವೈಶಿಷ್ಟ್ಯವನ್ನು ನೀಡಿದೆ. ಕಾರ್ಯಸಿದ್ಧಿ ಹಾಗೂ ಸಂಕಷ್ಟ ನಿವಾರಣೆಗಾಗಿ ಭಕ್ತರು ಇಲ್ಲಿಗೆ ಆಗಮಿಸಿ ಪೂಜೆ ಸಲ್ಲಿಸುವುದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ.*



### *ಶರವು ಹೆಸರು ಬಂದಿದ್ದು ಹೇಗೆ?*

*ಕ್ಷೇತ್ರದ ಸ್ಥಳಪುರಾಣವು ಸೂರ್ಯವಂಶದ ವೀರಬಾಹು ಮಹಾರಾಜನ ಕಥೆಯೊಂದಿಗೆ ಬೆಸೆದುಕೊಂಡಿದೆ. ಬೇಟೆಗೆ ತೆರಳಿದ್ದ ರಾಜನು ಕದ್ರಿ ಸಮೀಪದ ಅರಣ್ಯದಲ್ಲಿ ಹುಲಿ ಮತ್ತು ಹಸು ಒಂದೇ ಸ್ಥಳದಲ್ಲಿ ನಿಂತಿರುವುದನ್ನು ಕಂಡನೆಂದು ಐತಿಹ್ಯ ಹೇಳುತ್ತದೆ. ಹುಲಿ ಹಸುವಿನ ಮೇಲೆ ದಾಳಿ ಮಾಡುತ್ತಿದೆ ಎಂದು ಭಾವಿಸಿದ ರಾಜನು ಬಾಣ ಪ್ರಯೋಗಿಸಿದಾಗ ಅದು ಹಸುವಿಗೆ ತಾಗಿ ಹಸು ಮೃತಪಟ್ಟಿತು ಎನ್ನಲಾಗಿದೆ.*

*ಈ ಘಟನೆಯಿಂದ ಪಶ್ಚಾತ್ತಾಪಗೊಂಡ ರಾಜನು ಋಷಿ ಭಾರದ್ವಾಜರ ಸಲಹೆಯಂತೆ ಶಿವಲಿಂಗವನ್ನು ಪ್ರತಿಷ್ಠಾಪಿಸಿ ಪ್ರಾಯಶ್ಚಿತ್ತ ಕೈಗೊಂಡನೆಂದು ಸ್ಥಳಪುರಾಣ ವಿವರಿಸುತ್ತದೆ. ಬಾಣಕ್ಕೆ ಸಂಬಂಧಿಸಿದ ಈ ಸ್ಥಳಕ್ಕೆ ಬಳಿಕ 'ಶರವು' ಅಥವಾ 'ಶರಪಟ್ಟಣ' ಎಂಬ ಹೆಸರು ಬಂದಿದೆ ಎನ್ನಲಾಗುತ್ತದೆ.*

*ಇಂದಿಗೂ ಕ್ಷೇತ್ರದಲ್ಲಿರುವ ಶರಭೇಶ್ವರ ಸನ್ನಿಧಿ ಹಾಗೂ ಶರತೀರ್ಥವು ಈ ಪುರಾತನ ಪರಂಪರೆಯ ನೆನಪುಗಳನ್ನು ಉಳಿಸಿಕೊಂಡಿವೆ. ಇತಿಹಾಸ, ಸ್ಥಳಪುರಾಣ ಹಾಗೂ ವಿಶಿಷ್ಟ ದಶಭುಜ ಗಣಪತಿ ಆರಾಧನೆಯಿಂದಾಗಿ ಶರವು ಕ್ಷೇತ್ರವು ಮಂಗಳೂರಿನ ಪ್ರಮುಖ ಧಾರ್ಮಿಕ ತಾಣವಾಗಿ ಗುರುತಿಸಿಕೊಂಡಿದೆ.*

# ಬಯಲಾಯ್ತು ಇಡಿ ದಾಳಿ

1ನೇ ಪುಟದಿಂದ

ಲಂಚದ ಹಣವನ್ನು ವಿದೇಶಿ ಆಸ್ತಿಗಳ ಖರೀದಿ ಹಾಗೂ ಹೂಡಿಕೆಗೆ ಬಳಸಲಾಗಿದೆ ಎಂಬ ಶಂಕೆ ಇದೆ ಎಂದು ತನಿಖಾ ಸಂಸ್ಥೆ ಹೇಳಿದೆ.

ಶೋಧದ ವೇಳೆ ದೊರೆತ ದಾಖಲೆಗಳು ಹಾಗೂ ಇತರ ಸಾಕ್ಷ್ಯಗಳು ಕಾಂಗೋ ಮೂಲದ ಸಂಸ್ಥೆಯೊಂದರಲ್ಲಿ ಅನಧಿಕೃತ ಮಾರ್ಗದ ಮೂಲಕ ದೊಡ್ಡ ಪ್ರಮಾಣದ ಹಣವನ್ನು ನಗದು ರೂಪದಲ್ಲಿ ಹೂಡಿಕೆ ಅಥವಾ ವೆಚ್ಚ ಮಾಡಿರುವುದನ್ನು ಸೂಚಿಸುತ್ತವೆ ಎಂದು ಇಡಿ ಹೇಳಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ವಶಪಡಿಸಿಕೊಂಡ ದಾಖಲೆಗಳು, ನಗದು ಹಾಗೂ ಇತರ ಸಾಕ್ಷ್ಯಗಳ ಕುರಿತು ತನಿಖೆ ಮುಂದುವರಿದಿದ್ದು, ವಿದೇಶಿ ಹೂಡಿಕೆಗಳ ಮೂಲ ಮತ್ತು ಹಣದ ವಹಿವಾಟಿನ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಶೋಧದ ವೇಳೆ ವಶಪಡಿಸಿಕೊಂಡ ದಾಖಲೆಗಳು ಮತ್ತು ಹಣಕಾಸು ವ್ಯವಹಾರಗಳ ಆಧಾರದ ಮೇಲೆ ವಿದೇಶಿ ಹೂಡಿಕೆಗಳ ಜಾಲದ ಕುರಿತು ಇಡಿ ಅಧಿಕಾರಿಗಳು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ಇತರ ವ್ಯಕ್ತಿಗಳು ಹಾಗೂ ಸಂಸ್ಥೆಗಳ ಹಣಕಾಸು ವಹಿವಾಟುಗಳನ್ನೂ ಪರಿಶೀಲಿಸಲಾಗುತ್ತಿದೆ.

# ಸತೀಶ್ ಜಾರಕಿಹೊಳಿಗೆ ಕಾಂಗ್ರೆಸ್ ನಾಯಕರ ಅಭಯ

1ನೇ ಪುಟದಿಂದ

ಇದರ ಬೆನ್ನಲ್ಲೇ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ತಡರಾತ್ರಿ ಸತೀಶ್ ಜಾರಕಿಹೊಳಿ ಅವರ ಸರ್ಕಾರಿ ನಿವಾಸಕ್ಕೆ ಭೇಟಿ ನೀಡಿದ್ದು ಕುತೂಹಲಕ್ಕೆ ಕಾರಣವಾಗಿದೆ. ರಾತ್ರಿ ಸುಮಾರು 1 ಗಂಟೆ ವೇಳೆಗೆ ನಿವಾಸಕ್ಕೆ ಆಗಮಿಸಿದ ಡಿಕೆಶಿ, ಸುಮಾರು ಒಂದು ಗಂಟೆ ಕಾಲ ಸತೀಶ್ ಜಾರಕಿಹೊಳಿ ಅವರೊಂದಿಗೆ ಮಾತುಕತೆ ನಡೆಸಿದರು.

ಈ ಸಂದರ್ಭದಲ್ಲಿ ಇಡಿ ದಾಳಿ, ಅಧಿಕಾರಿಗಳ ಪರಿಶೀಲನೆ ಹಾಗೂ ತನಿಖೆಗೆ ಸಂಬಂಧಿಸಿದ ಬೆಳವಣಿಗೆಗಳ ಕುರಿತು ಇಬ್ಬರು ನಾಯಕರು ಚರ್ಚಿಸಿದ್ದಾರೆ ಎನ್ನಲಾಗಿದೆ. ದಾಳಿಯ ಸಂದರ್ಭದಲ್ಲಿ ಎದುರಾಗಿರುವ ಪರಿಸ್ಥಿತಿಯಲ್ಲಿ ಸಚಿವರೊಂದಿಗೆ ಪಕ್ಷ ಹಾಗೂ ಸರ್ಕಾರ ಬೆಂಬಲವಾಗಿ ನಿಲ್ಲಲಿದೆ ಎಂಬ ಸಂದೇಶವನ್ನು ಡಿಕೆಶಿ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸತೀಶ್ ಜಾರಕಿಹೊಳಿ ಅವರಿಗೆ ಸೇರಿದ ಬೆಂಗಳೂರು ಮತ್ತು ಬೆಳಗಾವಿ ಜಿಲ್ಲೆಯ ವಿವಿಧ ಸ್ಥಳಗಳ ಮೇಲೆ ಇಡಿ ಅಧಿಕಾರಿಗಳು ಸತತ ಎರಡು ದಿನಗಳ ಕಾಲ ಪರಿಶೀಲನೆ ನಡೆಸಿದ್ದರು. ಅವರ ಪುತ್ರಿ ಪ್ರಿಯಾಂಕಾ ಹಾಗೂ ಪುತ್ರ ರಾಹುಲ್‌ಗೆ ಸಂಬಂಧಿಸಿದ ಸ್ಥಳಗಳಲ್ಲಿಯೂ ಶೋಧ ನಡೆಸಲಾಗಿತ್ತು.

PRGI NO: KARKAN/2018/78481

# ಮಹಾರಾಷ್ಟ್ರದಲ್ಲಿ ಭೀಕರ ಅಪಘಾತ: 9 ಸಾವು

● ವಿಕ್ರಮ ವಾಹಿನಿ | ಭಂಡಾರ (ಮಹಾರಾಷ್ಟ್ರ)

ಟ್ರಕ್ ಮತ್ತು ಪಿಕಪ್ ವಾಹನದ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಮೂವರು ಮಕ್ಕಳು ಸೇರಿದಂತೆ ಒಂಬತ್ತು ಮಂದಿ ಮೃತಪಟ್ಟಿರುವ ಘಟನೆ ಮಹಾರಾಷ್ಟ್ರದ ಭಂಡಾರ ಜಿಲ್ಲೆಯ ಲಖ್ನಿ ತಾಲೂಕಿನ ಪಿಂಪಲ್‌ಗಾಂವ್ ಬಳಿ ಶುಕ್ರವಾರ ಮುಂಜಾನೆ ನಡೆದಿದೆ. ಅಪಘಾತದಲ್ಲಿ ಒಂಬತ್ತು ಮಂದಿ ಗಾಯಗೊಂಡಿದ್ದು, ಅವರನ್ನು ಭಂಡಾರ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ನಾಗ್ಪುರ-ರಾಯಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ಬೆಳಗ್ಗೆ ಸುಮಾರು 5 ಗಂಟೆಗೆ ಅಪಘಾತ ಸಂಭವಿಸಿದೆ. ಛತ್ತೀಸ್‌ಗಢದ ರಾಜಧಾನಿ ರಾಯಪುರದಿಂದ 19 ಮಹಿಳೆಯರು ಧಾರ್ಮಿಕ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲು ಪಿಕಪ್ ವಾಹನದಲ್ಲಿ ನಾಗ್ಪುರಕ್ಕೆ ತೆರಳುತ್ತಿದ್ದರು. ಪಿಂಪಲ್‌ಗಾಂವ್ ಬಳಿ ಅತಿವೇಗವಾಗಿ ಚಲಿಸುತ್ತಿದ್ದ ಪಿಕಪ್ ವಾಹನದ ಚಾಲಕನ ನಿಯಂತ್ರಣ ತಪ್ಪಿ ಮುಂದೆ ಸಾಗುತ್ತಿದ್ದ ಟ್ರಕ್‌ನ ಹಿಂಭಾಗಕ್ಕೆ ಡಿಕ್ಕಿ ಹೊಡೆದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಡಿಕ್ಕಿಯ ರಭಸಕ್ಕೆ ಪಿಕಪ್ ವಾಹನ ಸಂಪೂರ್ಣ ನಜ್ಜುಗುಜ್ಜಾಗಿದ್ದು, ಎಂಟು ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗಂಭೀರವಾಗಿ ಗಾಯಗೊಂಡಿದ್ದ ಮಹಿಳೆಯೊಬ್ಬರು ಆಸ್ಪತ್ರೆಗೆ ಸಾಗಿಸಿದ ಬಳಿಕ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ಮೃತರಲ್ಲಿ ನಾಗ್ಪುರದ ಜಂಬ್ಯೆ ರಾಮಾವತಾರ್ ವರ್ಮಾ (50) ಹಾಗೂ ಛತ್ತೀಸ್‌ಗಢದ ಮೀನಾಕ್ಷಿ ರಾಜ್‌ಕುಮಾರ್ ವರ್ಮಾ (26), ಧೈರ್ಯ ರೂಪೇಶ್ ಉಯಿಕೆ (4), ಸ್ವೀಟಿ ರೂಪೇಶ್ ಉಯಿಕೆ (6), ಗಾಯತ್ರಿ ರೂಪೇಶ್ ಉಯಿಕೆ (30), ಗಣೇಶಿಯಾ ಅರವತ್ ಪಟೇಲ್ (22) ಮತ್ತು ಸರಿತಾ ವಿಜಯ್ ವರ್ಮಾ (30) ಸೇರಿದ್ದಾರೆ. ಮೃತಪಟ್ಟ ಇನ್ನಿಬ್ಬರು ಮಹಿಳೆಯರ ಗುರುತು ಪತ್ತೆಯಾಗಬೇಕಿದೆ.

ಗಾಯಗೊಂಡವರನ್ನು ಗುಲ್ಶನ್ ರಮೇಶ್ ವರ್ಮಾ (22), ಲಲಿತಾ ಯೋಗೇಶ್ ಪಟ್ಲೆ (26), ತನ್ಮಯ್ ಯೋಗೇಶ್ ಪಟ್ಲೆ (4), ಡಾಲಿ ಅರವತ್ ಪಟೇಲ್ (4), ಸುಖಿ ಯಾರಿ ಪಟೇಲ್ (20), ರಾಜಕುಮಾರಿ ಪಟೇಲ್ (57), ರಾಮಯ್ಯ ಪಟೇಲ್ (30) ಹಾಗೂ ದರಿಯಾ ಪಟೇಲ್ (7) ಎಂದು ಗುರುತಿಸಲಾಗಿದೆ.

ಅಪಘಾತದ ಮಾಹಿತಿ ಲಭ್ಯವಾಗುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಧಾವಿಸಿ ಗ್ರಾಮಸ್ಥರ ನೆರವಿನೊಂದಿಗೆ ರಕ್ಷಣಾ ಕಾರ್ಯಾಚರಣೆ ನಡೆಸಿದರು. ವಾಹನದಲ್ಲಿ ಸಿಲುಕಿದ್ದ ಮೃತದೇಹಗಳನ್ನು ಹೊರತೆಗೆದು, ಗಾಯಾಳುಗಳನ್ನು ತಕ್ಷಣ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಯಿತು.

ಅಪಘಾತದ ಬಳಿಕ ಪಿಕಪ್ ವಾಹನದ ಚಾಲಕ ಸ್ಥಳದಿಂದ ಪರಾರಿಯಾಗಿದ್ದು, ಆತನಿಗಾಗಿ ಪೊಲೀಸರು ಶೋಧ ನಡೆಸುತ್ತಿದ್ದಾರೆ. ಅಪಘಾತಕ್ಕೆ ಅತಿವೇಗವೇ ಕಾರಣವೇ ಎಂಬುದೂ ಸೇರಿದಂತೆ ಘಟನೆ ಕುರಿತು ತನಿಖೆ ಮುಂದುವರಿದಿದೆ.

### ಎಸ್‌ಸಿಎಸ್‌ಪಿ-ಟಿಎಸ್‌ಪಿ ಯೋಜನೆಗಳ
# ಸಾಮಾಜಿಕ ಪರಿಶೋಧನೆ

● ವಿಕ್ರಮ ವಾಹಿನಿ | ಬೆಂಗಳೂರು

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗಾಗಿ ಜಾರಿಗೊಳಿಸಿರುವ ಎಸ್‌ಸಿಎಸ್‌ಪಿ-ಟಿಎಸ್‌ಪಿ ಯೋಜನೆಗಳ ಅನುಷ್ಠಾನ ಹಾಗೂ ಫಲಾನುಭವಿಗಳ ಮೇಲಿನ ಪರಿಣಾಮ ಪರಿಶೀಲಿಸಲು ಸಾಮಾಜಿಕ ಲೆಕ್ಕಪರಿಶೋಧನೆ ಮುಂದುವರಿದಿದೆ ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿವಿಧ ವಿಶ್ವವಿದ್ಯಾಲಯಗಳು, ಮೌಲ್ಯಮಾಪನ ಸಂಸ್ಥೆಗಳು ಹಾಗೂ ಸಾಮಾಜಿಕ ಲೆಕ್ಕಪರಿಶೋಧನಾ ನಿರ್ದೇಶನಾಲಯದ ಮೂಲಕ ಪರಿಶೋಧನೆ ನಡೆಸಲಾಗುತ್ತಿದೆ.

2026-27ನೇ ಸಾಲಿನಲ್ಲಿ ಎಸ್‌ಸಿಎಸ್‌ಪಿ ಅಡಿ ರೂ 32,177 ಕೋಟಿ ಹಾಗೂ ಟಿಎಸ್‌ಪಿ ಅಡಿ ರೂ 13,077 ಕೋಟಿ ಸೇರಿ ಒಟ್ಟು ರೂ 45,254 ಕೋಟಿಯನ್ನು 34 ಇಲಾಖೆಗಳ 451 ಯೋಜನೆಗಳಿಗೆ ಹಂಚಿಕೆ ಮಾಡಲಾಗಿದೆ. ಹಿಂದಿನ ಸಾಲಿಗಿಂತ ರೂ 2,751 ಕೋಟಿ ಹೆಚ್ಚುವರಿ ಅನುದಾನ ಒದಗಿಸಲಾಗಿದೆ. 10 ಪ್ರಮುಖ ಇಲಾಖೆಗಳಿಗೇ ರೂ 32,328 ಕೋಟಿ, ಅಂದರೆ ಒಟ್ಟು ಅನುದಾನದ ಶೇ.75ರಷ್ಟು ಹಂಚಿಕೆಯಾಗಿದೆ ಎಂದು ಹೇಳಿದರು.



2025-26ರಲ್ಲಿ ಬಿಡುಗಡೆಯಾದ ಅನುದಾನದಲ್ಲಿ ರೂ 104.56 ಕೋಟಿ ವೆಚ್ಚವಾಗದೆ ಉಳಿದಿದ್ದು, ಕಾಯ್ದೆಯನ್ವಯ 2027-28ನೇ ಸಾಲಿಗೆ ಮರುಹಂಚಿಕೆ ಮಾಡಲಾಗಿದೆ. ವಿವಿಧ ಇಲಾಖೆಗಳ ರೂ 2,841 ಕೋಟಿ ಅನುದಾನ ಬಿಡುಗಡೆಯಾಗಬೇಕಿದ್ದು, ಇದರಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ರೂ 2,822 ಕೋಟಿ ಸೇರಿದೆ ಎಂದು ಸಚಿವರು ವಿವರಿಸಿದರು.

ಅನುದಾನ ನೈಜ ಫಲಾನುಭವಿಗಳಿಗೆ ತಲುಪುತ್ತಿದೆಯೇ ಎಂಬುದನ್ನು ಅಧಿಕಾರಿಗಳು ಜಿಲ್ಲೆಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು. ಯೋಜನೆಗಳಿಂದ ಪರಿಶಿಷ್ಟ ಜಾತಿ-ಪಂಗಡಗಳ ಜೀವನಮಟ್ಟದಲ್ಲಿ ಆಗಿರುವ ಬದಲಾವಣೆಯನ್ನು ಮೌಲ್ಯಮಾಪನ ಮಾಡಿ, ಅಗತ್ಯ ಸುಧಾರಣೆ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ ಎಂದು ಮುನಿಯಪ್ಪ ತಿಳಿಸಿದರು.

# ಗಣೇಶ ಹಬ್ಬಕ್ಕೆ ದೊರೆಯುತ್ತವೆ ಬಗೆ ಬಗೆಯ ಬಾಡಿಗೆ ಗಣೇಶ!

● ವಿಕ್ರಮ ವಾಹಿನಿ | ಬೆಂಗಳೂರು


ನಗರದಲ್ಲಿ ಬಾಡಿಗೆಗೆ ಗಣಪ ಮೂರ್ತಿಗಳು ಸಿಗುತ್ತಿರುವುದು ಈ ಬಾರಿಯ ಗಣೇಶೋತ್ಸವದ ವಿಶೇಷವಾಗಿದೆ. ಗಣೇಶ ಹಬ್ಬಕ್ಕೆ ವೆರೈಟಿ ವೆರೈಟಿ ಗಣೇಶ ಮೂರ್ತಿಗಳು ಮಾರುಕಟ್ಟೆಗೆ ಲಗ್ಗೆ ಇಡುವುದು ಸಾಮಾನ್ಯ. ಸಣ್ಣ ಗಾತ್ರದ ಗಣಪನಿಂದ ಹಿಡಿದು ಬೃಹತ್ ಗಾತ್ರದ ಗಣೇಶ ಮೂರ್ತಿವರೆಗೆ ಎಲ್ಲ ಮಾದರಿಗಳ ಮೂರ್ತಿಗಳು ಮಾರಾಟಕ್ಕೆ ಸಿದ್ಧವಾಗಿವೆ. ಆದರೆ, ಈ ಬಾರಿಯ ಹಬ್ಬದ ಮಾರುಕಟ್ಟೆಯಲ್ಲಿ ಎಲ್ಲರ ಗಮನ ಸೆಳೆಯುತ್ತಿರುವುದು ಮಾತ್ರ ಬಾಡಿಗೆ ಗಣಪ.

ಅರೇ ಗಣೇಶನನ್ನೂ ಬಾಡಿಗೆಗೆ ಕೊಡ್ತಾರಾ ಎಂಬ ಅನುಮಾನ ಮೂಡಬಹುದು. ಆದರೆ, ಬೃಹತ್ ಗಾತ್ರದ ಫೈಬರ್ ಗಣೇಶ ಮೂರ್ತಿಗಳನ್ನು ವ್ಯಾಪಾರಿಗಳು ಬಾಡಿಗೆಗೆ ನೀಡುತ್ತಿದ್ದು, ಸಾರ್ವಜನಿಕ ಗಣೇಶೋತ್ಸವ ಆಚರಿಸುವ ಯುವಕರ ತಂಡಗಳು ಹಾಗೂ ಸಂಘ-ಸಂಸ್ಥೆಗಳಿಂದ ಇದಕ್ಕೆ ಬೇಡಿಕೆ ವ್ಯಕ್ತವಾಗುತ್ತಿದೆ.

ನಗರದಾದ್ಯಂತ ಈಗಾಗಲೇ ಹಬ್ಬದ ಸಂಭ್ರಮ ಮನೆ ಮಾಡಿದೆ. ಯಾವುದೇ ಭೇದ-ಭಾವವಿಲ್ಲದೆ ಎಲ್ಲರೂ ಒಟ್ಟಾಗಿ ವಿಜೃಂಭಣೆಯಿಂದ ಆಚರಿಸುವ ಗೌರಿ-ಗಣೇಶ ಹಬ್ಬಕ್ಕಾಗಿ ಜನರು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದ್ದಾರೆ. ರಸ್ತೆ ರಸ್ತೆಗಳಲ್ಲಿ, ಬಡಾವಣೆಗಳಲ್ಲಿ ಹಾಗೂ ಮನೆ ಮನೆಗಳಲ್ಲಿ ಗೌರಿ-ಗಣೇಶನನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಲು ಸಿದ್ಧತೆ ನಡೆಯುತ್ತಿದೆ.ಹೀಗಾಗಿ ನಗರದ ಮಾರುಕಟ್ಟೆಗಳಲ್ಲಿ ವಿವಿಧ ವಿನ್ಯಾಸ, ಗಾತ್ರ ಹಾಗೂ ರೂಪದ ಗಣೇಶ ಮೂರ್ತಿಗಳು ಲಗ್ಗೆ ಇಟ್ಟಿವೆ.

ಸುಮಾರು 100 ರೂಪಾಯಿಯಿಂದ ಆರಂಭವಾಗಿ ಲಕ್ಷಾಂತರ ರೂಪಾಯಿ ಮೌಲ್ಯದವರೆಗಿನ ಗಣೇಶ ಮೂರ್ತಿಗಳು ಮಾರಾಟಕ್ಕೆ ಲಭ್ಯವಿದ್ದು, ದುಬಾರಿ ಹಾಗೂ ವಿಶೇಷ ವಿನ್ಯಾಸದ ಮೂರ್ತಿಗಳಿಗೆ ಹಬ್ಬಕ್ಕೂ ಮುನ್ನವೇ ಬುಕ್ಕಿಂಗ್ ಕೂಡ ನಡೆಯುತ್ತಿದೆ.

ಪರಿಸರ ಮಾಲಿನ್ಯ ಉಂಟುಮಾಡುವ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ವಿಸರ್ಜನೆಗೆ ನಿರ್ಬಂಧ ಇರುವ ಹಿನ್ನೆಲೆಯಲ್ಲಿ, ಜನರು ಹೆಚ್ಚಾಗಿ ಮಣ್ಣಿನ ಗಣೇಶ ಮೂರ್ತಿಗಳತ್ತ ಮುಖ ಮಾಡುತ್ತಿದ್ದಾರೆ. ಆದರೆ, ಸಾರ್ವಜನಿಕ ಗಣೇಶೋತ್ಸವದ ವೇಳೆ ಬೃಹತ್ ಗಾತ್ರದ ಗಣಪನನ್ನು ಪ್ರತಿಷ್ಠಾಪಿಸಬೇಕು ಎಂಬ ಆಸೆ ಹಲವರಿಗೆ ಇರುತ್ತದೆ. ಇದೇ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಕೆಲ ವ್ಯಾಪಾರಿಗಳು ಬೃಹತ್ ಫೈಬರ್ ಗಣೇಶ ಮೂರ್ತಿಗಳನ್ನು ಬಾಡಿಗೆಗೆ ನೀಡುವ ಹೊಸ ವ್ಯವಸ್ಥೆ ಆರಂಭಿಸಿದ್ದಾರೆ.



ಫೈಬರ್‌ನಿಂದ ತಯಾರಿಸಲಾದ ಬೃಹತ್ ಗಣೇಶ ಮೂರ್ತಿಯನ್ನು ಪ್ರತಿದಿನಕ್ಕೆ ಸುಮಾರು 30 ಸಾವಿರ ರೂಪಾಯಿ ಬಾಡಿಗೆಗೆ ನೀಡಲಾಗುತ್ತಿದೆ. ಒಂದು ದಿನ, ಮೂರು ದಿನ ಅಥವಾ ಐದು ದಿನಗಳ ಕಾಲ ಅಗತ್ಯಕ್ಕೆ ಅನುಗುಣವಾಗಿ ಮೂರ್ತಿಯನ್ನು ಬಾಡಿಗೆಗೆ ಪಡೆದುಕೊಳ್ಳಬಹುದು. ಹಬ್ಬ ಹಾಗೂ ಪೂಜೆ ಮುಗಿದ ಬಳಿಕ ಮೂರ್ತಿಯನ್ನು ಮತ್ತೆ ವ್ಯಾಪಾರಿಗಳಿಗೆ ವಾಪಸ್ ನೀಡಬೇಕಾಗುತ್ತದೆ.

ಈ ವ್ಯವಸ್ಥೆಯ ಮತ್ತೊಂದು ವಿಶೇಷವೆಂದರೆ, ಬೃಹತ್ ಫೈಬರ್ ಗಣೇಶ ಮೂರ್ತಿಯೊಂದಿಗೆ ಪೂಜಾ ವಿಧಿವಿಧಾನಗಳಿಗಾಗಿ ಮಣ್ಣಿನ ಗಣೇಶ ಮೂರ್ತಿಯನ್ನೂ ಉಚಿತವಾಗಿ ನೀಡಲಾಗುತ್ತದೆ. ಸಾರ್ವಜನಿಕರು ಮಣ್ಣಿನ ಗಣಪನಿಗೆ ಪೂಜೆ ಸಲ್ಲಿಸಿ, ಹಬ್ಬದ ಅಂತ್ಯದಲ್ಲಿ ಅದನ್ನು ಪರಿಸರ ಸ್ನೇಹಿಯಾಗಿ ವಿಸರ್ಜಿಸಬಹುದು.

ಈ ಕುರಿತು ಗಣೇಶ ಮೂರ್ತಿ ವ್ಯಾಪಾರಿ ಶ್ರೀನಿವಾಸ್ ಮಾತನಾಡಿ, ಯುವಕರ ತಂಡಗಳು ಮತ್ತು ಸಂಘಟನೆಗಳಿಗೆ ಬೃಹತ್ ಗಣೇಶ ಮೂರ್ತಿ ಪ್ರತಿಷ್ಠಾಪಿಸುವ ಆಸೆ ಇರುತ್ತದೆ. ಆದರೆ, ಪಿಒಪಿ ಮೂರ್ತಿಗಳಿಗೆ ಕಾನೂನು ತೊಡಕುಗಳಿದ್ದು, ವಿಸರ್ಜನೆಗೂ ನಿರ್ಬಂಧವಿದೆ. ಈ ಹಿನ್ನೆಲೆಯಲ್ಲಿ ಫೈಬರ್‌ನಿಂದ ತಯಾರಿಸಿದ ಬೃಹತ್ ಗಣೇಶ ಮೂರ್ತಿಗಳನ್ನು ಬಾಡಿಗೆಗೆ ನೀಡುತ್ತಿದ್ದೇವೆ. ಪ್ರತಿದಿನಕ್ಕೆ 30 ಸಾವಿರ ರೂಪಾಯಿ ಬಾಡಿಗೆ ನಿಗದಿ ಮಾಡಿದ್ದೇವೆ. ಮೂರ್ತಿಯನ್ನು ತೆಗೆದುಕೊಂಡು ಹೋಗುವಾಗ ಮುಂಗಡ ಹಣ ಪಾವತಿಸಬೇಕು. ಹಬ್ಬ ಮುಗಿದ ನಂತರ ಮೂರ್ತಿಯನ್ನು ವಾಪಸ್ ನೀಡಿದರೆ, ಬಾಡಿಗೆ ಮೊತ್ತವನ್ನು ಕಡಿತಗೊಳಿಸಿ ಉಳಿದ ಮುಂಗಡ ಹಣವನ್ನು ಹಿಂದಿರುಗಿಸಲಾಗುತ್ತದೆ ಎಂದು ತಿಳಿಸಿದರು.

# ವೈಟ್‌ಫೀಲ್ಡ್ ಪೊಲೀಸರ ವಿರುದ್ಧದ ದೂರಿಗೆ KSHRC ಸ್ಪಂದನೆ: ತನಿಖೆಗೆ ಆದೇಶ

● ವಿಕ್ರಮ ವಾಹಿನಿ | ಬೆಂಗಳೂರು

ವೈಟ್‌ಫೀಲ್ಡ್ ಪೊಲೀಸರ ವಿರುದ್ಧ ಸಲ್ಲಿಸಲಾಗಿದ್ದ ದೂರನ್ನು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ (KSHRC) ಪ್ರಕರಣವಾಗಿ ದಾಖಲಿಸಿಕೊಂಡಿದ್ದು, ಘಟನೆಯ ಕುರಿತು ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಆಯೋಗದ ತನಿಖಾ ವಿಭಾಗಕ್ಕೆ ನಿರ್ದೇಶನ ನೀಡಿದೆ.

2026ರ ಆಗಸ್ಟ್ 6ರಂದು ಉಡುಪಿಯಲ್ಲಿ ನಡೆದ ಪೊಲೀಸ್ ವರ್ತನೆಗೆ ಸಂಬಂಧಿಸಿದಂತೆ ದೂರು ಸಲ್ಲಿಸಲಾಗಿತ್ತು. ಯಾವುದೇ ನೋಟಿಸ್ ನೀಡದೆ ಉಡುಪಿಯಿಂದ ರಾತ್ರೋರಾತ್ರಿ ಬೆಂಗಳೂರಿಗೆ ಕರೆದೊಯ್ದು, ಬೆಳಗ್ಗೆ 5.30ರಿಂದ ಮಧ್ಯಾಹ್ನ 2ರವರೆಗೆ ವೈಟ್‌ಫೀಲ್ಡ್ ಪೊಲೀಸ್ ಠಾಣೆಯಲ್ಲಿ ಇರಿಸಲಾಗಿತ್ತು. ಈ ವೇಳೆ ವಕೀಲರನ್ನು ಸಂಪರ್ಕಿಸಲು ಅವಕಾಶ ನೀಡದೆ ಮಾನಸಿಕ ಹಾಗೂ ದೈಹಿಕ ಕಿರುಕುಳ ನೀಡಲಾಗಿದೆ ಎಂದು ದೂರುದಾರರು ಆರೋಪಿಸಿದ್ದಾರೆ.

ದೂರನ್ನು ಸ್ವೀಕರಿಸಿರುವ KSHRC, HRC Case No. HRC/9/135/2026 ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದೆ. ಘಟನೆಗೆ ಸಂಬಂಧಿಸಿದ ದೂರುದಾರರು ಹಾಗೂ ಮಾಹಿತಿ ಹೊಂದಿರುವ ಸಾಕ್ಷಿಗಳನ್ನು ವಿಚಾರಣೆ ನಡೆಸಿ, ಅಗತ್ಯ ದಾಖಲೆಗಳು, ಆಡಿಯೋ ಮತ್ತು ವಿಡಿಯೋ ಸೇರಿದಂತೆ ಲಭ್ಯವಿರುವ ಸಾಕ್ಷ್ಯಗಳನ್ನು ಪರಿಶೀಲಿಸುವಂತೆ ತನಿಖಾ ವಿಭಾಗಕ್ಕೆ ಸೂಚಿಸಲಾಗಿದೆ. ಆಯೋಗದ ನಿರ್ದೇಶನದಂತೆ ಸೆ.16ರಂದು ಬೆಳಗ್ಗೆ 10 ಗಂಟೆಗೆ KSHRC ಮುಂದೆ ಹಾಜರಾಗಿ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳು ಹಾಗೂ ಲಭ್ಯವಿರುವ ಸಾಕ್ಷ್ಯಗಳನ್ನು ಸಲ್ಲಿಸುವುದಾಗಿ ದೂರುದಾರರು ತಿಳಿಸಿದ್ದಾರೆ. ಪ್ರಕರಣದ ದೂರು ಸಂಖ್ಯೆ 3427/10/31/2026-2 ಆಗಿದೆ.

ಪೊಲೀಸ್ ಸೇರಿದಂತೆ ಯಾವುದೇ ಕಾನೂನು ಜಾರಿ ಸಂಸ್ಥೆಗಳು ಕಾನೂನಿನ ಚೌಕಟ್ಟಿನೊಳಗೆ ಕಾರ್ಯನಿರ್ವಹಿಸುವುದು ಹಾಗೂ ನಾಗರಿಕರ ಮಾನವ ಹಕ್ಕುಗಳನ್ನು ರಕ್ಷಿಸುವುದು ಅಗತ್ಯ. KSHRC ತನಿಖೆಯಿಂದ ಘಟನೆಯ ಸಂಪೂರ್ಣ ಸತ್ಯ ಹೊರಬರುವ ವಿಶ್ವಾಸವಿದೆ ಎಂದು ದೂರುದಾರರು ಹೇಳಿದ್ದಾರೆ.

# ವೀರ್ ದಾಸ್ ಕಾಮಿಡಿ ಶೋಗೆ ಹಿಂದೂ ಸಂಘಟನೆಗಳ ವಿರೋಧ

● ವಿಕ್ರಮ ವಾಹಿನಿ | ಬೆಂಗಳೂರು



ನಗರದ ಗುಡ್ ಶೆಫರ್ಡ್ ಆಡಿಟೋರಿಯಂನಲ್ಲಿ ಸೆ.11 ಮತ್ತು 12ರಂದು ಆಯೋಜಿಸಿರುವ ಸ್ಟ್ಯಾಂಡ್‌ಅಪ್ ಕಾಮಿಡಿಯನ್ ವೀರ್ ದಾಸ್ ಅವರ ಕಾರ್ಯಕ್ರಮವನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿ ಹಿಂದೂ ರಾಷ್ಟ್ರ ಸಮನ್ವಯ ಸಮಿತಿ ಅಶೋಕನಗರ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದೆ.

ಕಾರ್ಯಕ್ರಮದಲ್ಲಿ ಹಿಂದೂ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡುವಂತಹ ವಿಷಯಗಳನ್ನು ಪ್ರಸ್ತುತಪಡಿಸುವ ಸಾಧ್ಯತೆಯಿದೆ ಎಂದು ಆರೋಪಿಸಿರುವ ಸಮಿತಿ, ಕಾರ್ಯಕ್ರಮಕ್ಕೆ ನೀಡಿರುವ ಅನುಮತಿಯನ್ನು ಪೊಲೀಸರು ಮರುಪರಿಶೀಲಿಸಬೇಕು ಎಂದು ಒತ್ತಾಯಿಸಿದೆ. ಈ ಸಂದರ್ಭದಲ್ಲಿ ಶ್ರೀರಾಮ ಸೇನೆಯ ಮೋಹನ, ಹಿಂದೂ ಜನಜಾಗೃತಿ ಸಮಿತಿಯ ನಾರಾಯಣ ಗೌಡ ಸೇರಿದಂತೆ ಪ್ರಮುಖ ಕಾರ್ಯಕರ್ತರು ಉಪಸ್ಥಿತರಿದ್ದರು.

ವೀರ್ ದಾಸ್ ಅವರು ಈ ಹಿಂದೆ 'ಐ ಕಮ್ ಫ್ರಮ್ ಟು ಇಂಡಿಯಾಸ್' ಸೇರಿದಂತೆ ವಿವಿಧ ಕಾರ್ಯಕ್ರಮಗಳಲ್ಲಿ ಭಾರತ, ಭಾರತೀಯ ಸಮಾಜ ಹಾಗೂ ಮಹಿಳೆಯರ ಕುರಿತು ಆಕ್ಷೇಪಾರ್ಹ ರೀತಿಯಲ್ಲಿ ಮಾತನಾಡಿದ್ದಾರೆ ಎಂದು ಸಂಘಟನೆ ಆರೋಪಿಸಿದೆ. ಹಾಸ್ಯದ ಹೆಸರಿನಲ್ಲಿ ಹಿಂದೂ ದೇವತೆಗಳು ಹಾಗೂ ಧಾರ್ಮಿಕ ನಂಬಿಕೆಗಳನ್ನು ಅವಹೇಳನ ಮಾಡುವ ಹೇಳಿಕೆಗಳನ್ನು ನೀಡಿರುವುದು ಆಕ್ಷೇಪಕ್ಕೆ ಕಾರಣವಾಗಿದೆ ಎಂದು ತಿಳಿಸಿದೆ.

2021ರಲ್ಲಿ ವಾಷಿಂಗ್ಟನ್ ಡಿಸಿಯಲ್ಲಿ ವೀರ್ ದಾಸ್ ನೀಡಿದ್ದ ಹೇಳಿಕೆಗಳ ವಿರುದ್ಧ ದೆಹಲಿ ಮತ್ತು ಮುಂಬೈನಲ್ಲಿ ಪ್ರಕರಣಗಳು ದಾಖಲಾಗಿದ್ದವು ಎಂದು ಸಮಿತಿ ಉಲ್ಲೇಖಿಸಿದೆ. 2022ರಲ್ಲಿ ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ ಅವರ ಕಾರ್ಯಕ್ರಮವೂ ವಿರೋಧದ ಹಿನ್ನೆಲೆಯಲ್ಲಿ ರದ್ದಾಗಿತ್ತು ಎಂದು ಹೇಳಿದೆ.

ಅಭಿವ್ಯಕ್ತಿ ಸ್ವಾತಂತ್ರ್ಯದ ಹೆಸರಿನಲ್ಲಿ ಯಾವುದೇ ಧರ್ಮ, ದೇವತೆ ಅಥವಾ ರಾಷ್ಟ್ರೀಯ ಚಿಹ್ನೆಗಳಿಗೆ ಅವಮಾನ ಮಾಡುವುದನ್ನು ಒಪ್ಪಲು ಸಾಧ್ಯವಿಲ್ಲ. ಇಂತಹ ಕಾರ್ಯಕ್ರಮಗಳಿಂದ ಕಾನೂನು ಸುವ್ಯವಸ್ಥೆಗೆ ಧಕ್ಕೆ ಉಂಟಾಗದಂತೆ ಪೊಲೀಸರು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಸಮಿತಿ ಮನವಿ ಮಾಡಿದೆ.

ಕಾರ್ಯಕ್ರಮದಲ್ಲಿ ಧಾರ್ಮಿಕ ಅಥವಾ ರಾಷ್ಟ್ರೀಯ ಭಾವನೆಗಳಿಗೆ ಧಕ್ಕೆ ತರುವಂತಹ ಯಾವುದೇ ಅಂಶಗಳು ಪ್ರದರ್ಶಿತವಾದರೆ, ಅದರ ಜವಾಬ್ದಾರಿಯನ್ನು ಆಯೋಜಕರು ಮತ್ತು ಸಂಬಂಧಪಟ್ಟ ಇಲಾಖೆಗಳು ಹೊರಬೇಕಾಗುತ್ತದೆ ಎಂದು ಸಂಘಟನೆ ಎಚ್ಚರಿಸಿದೆ.

# 15ರಂದು ಪ್ರಜಾಪ್ರಭುತ್ವ ದಿನಾಚರಣೆ, ಯುವ ಸಂಸತ್ತು ಚಾಲನೆ: ಮುನಿಯಪ್ಪ

● ವಿಕ್ರಮ ವಾಹಿನಿ | ಬೆಂಗಳೂರು



ಯುವ ಸಮುದಾಯಕ್ಕೆ ದೇಶದ ಸಂಸದೀಯ ವ್ಯವಸ್ಥೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಪರಿಚಯಿಸುವ ಉದ್ದೇಶದಿಂದ ಸೆಪ್ಟೆಂಬರ್ 15ರಂದು ರಾಜ್ಯಾದ್ಯಂತ ಪ್ರಜಾಪ್ರಭುತ್ವ ದಿನಾಚರಣೆಯೊಂದಿಗೆ ಯುವ ಸಂಸತ್ತು ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.

ವಿಧಾನಸೌಧದ ಸಮಿತಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರಿಂದ ರಾಜ್ಯಮಟ್ಟದ ಕಾರ್ಯಕ್ರಮಕ್ಕೆ ಚಾಲನೆ ದೊರೆಯಲಿದೆ.

ಇದೇ ವೇಳೆ ಎಲ್ಲ ಜಿಲ್ಲೆಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕುಗಳಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು.

ತಾಲ್ಲೂಕು ಮಟ್ಟದಲ್ಲಿ ಆಯ್ಕೆಯಾಗುವ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದ ಯುವ ಸಂಸತ್ತು ಸಭೆಗೆ ಕಳುಹಿಸಲಾಗುವುದು. ಸೆ.11ರಿಂದ ಸೆ.30ರವರೆಗೆ ಜಿಲ್ಲಾ ಮಟ್ಟದ ಕಾರ್ಯಕ್ರಮಗಳು ನಡೆಯಲಿದ್ದು, ಅಲ್ಲಿಂದ ಆಯ್ಕೆಯಾಗುವ ವಿದ್ಯಾರ್ಥಿಗಳು ರಾಜ್ಯಮಟ್ಟದ ಯುವ ಸಂಸತ್ತಿನಲ್ಲಿ ಭಾಗವಹಿಸಲಿದ್ದಾರೆ.

ಪ್ರತಿ ವಿಧಾನಸಭಾ ಕ್ಷೇತ್ರದಿಂದ ಒಬ್ಬ ವಿದ್ಯಾರ್ಥಿಯಂತೆ ಒಟ್ಟು 224 ವಿದ್ಯಾರ್ಥಿಗಳು ರಾಜ್ಯಮಟ್ಟದ ಯುವ ಸಂಸತ್ತು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನವೆಂಬರ್ 26ರಂದು ಸಂವಿಧಾನ ದಿನದ ಅಂಗವಾಗಿ ಬೆಂಗಳೂರಿನಲ್ಲಿ ರಾಜ್ಯಮಟ್ಟದ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಸಚಿವರು ಹೇಳಿದರು.

ತಾಲ್ಲೂಕು ಮಟ್ಟದಲ್ಲಿ ವಿದ್ಯಾರ್ಥಿಗಳ ಆಯ್ಕೆಯನ್ನು ಸ್ಥಳೀಯ ಶಾಸಕರ ನೇತೃತ್ವದ ಸಮಿತಿ ನಿಗದಿತ ಮಾನದಂಡಗಳ ಆಧಾರದ ಮೇಲೆ ನಡೆಸಲಿದೆ. ಜಿಲ್ಲಾ ಮಟ್ಟದ ಆಯ್ಕೆ ಪ್ರಕ್ರಿಯೆಯ ಬಳಿಕ ರಾಜ್ಯಮಟ್ಟಕ್ಕೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಕಾರ್ಯಕ್ರಮದ ಸಿದ್ಧತೆ ಕುರಿತು ಸೆ.10ರಂದು ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ನಡೆಸಿ ಅಗತ್ಯ ಸೂಚನೆ ನೀಡಲಾಗಿದೆ ಎಂದರು.

ಸಮಾಜ ಕಲ್ಯಾಣ ಸಚಿವರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಪರಿಶಿಷ್ಟ ಜಾತಿಯ ವಿವಿಧ ಸಮುದಾಯಗಳ ಅಭಿವೃದ್ಧಿ ನಿಗಮಗಳ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರೊಂದಿಗೆ ಸಭೆ ನಡೆಸಲಾಗಿದೆ. ನಿಗಮಗಳ ಸಮಸ್ಯೆಗಳನ್ನು ಪರಿಶೀಲಿಸಿ, ಪರಿಶಿಷ್ಟ ಜಾತಿಯ 101 ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಅಗತ್ಯ ಅನುದಾನ ಒದಗಿಸಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಲಾಗುವುದು ಎಂದು ಮುನಿಯಪ್ಪ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಆಯುಕ್ತ ಡಾ.ಕೆ. ರಾಕೇಶ್ ಕುಮಾರ್ ಸೇರಿದಂತೆ ಹಿರಿಯ ಅಧಿಕಾರಿಗಳು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಮೆಜೆಸ್ಟಿಕ್ ರೈಲು ಬೋಗಿಗೆ ಬೆಂಕಿ: ಆರೋಪಿ ಬಂಧನ

● ವಿಕ್ರಮ ವಾಹಿನಿ | ಬೆಂಗಳೂರು

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ (ಮೆಜೆಸ್ಟಿಕ್) ರೈಲು ನಿಲ್ದಾಣದ ಯಾರ್ಡ್‌ನಲ್ಲಿ ನಿಲ್ಲಿಸಲಾಗಿದ್ದ ಖಾಲಿ ರೈಲು ಬೋಗಿಯಲ್ಲಿ ಸಂಭವಿಸಿದ್ದ ಅಗ್ನಿ ಅವಘಡದ ರಹಸ್ಯವನ್ನು ರೈಲ್ವೆ ಪೊಲೀಸರು ಭೇದಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ನಾಸಿಕ್ ಮೂಲದ ರವಿ ಬೋರಕ್‌ತಿರ್ವ (40) ಎಂಬಾತನನ್ನು ಬಂಧಿಸಿದ್ದಾರೆ.

ಆರಂಭದಲ್ಲಿ ಬೋಗಿಯಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿರಬಹುದು ಎಂದು ಶಂಕಿಸಲಾಗಿತ್ತು. ಆದರೆ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ ವ್ಯಕ್ತಿಯೊಬ್ಬ ಬೋಗಿಯೊಳಗೆ ಪ್ರವೇಶಿಸಿರುವುದು ಪತ್ತೆಯಾಗಿದ್ದು, ತನಿಖೆ ನಡೆಸಿದಾಗ ಆತನ ಕೃತ್ಯದಿಂದಲೇ ಬೆಂಕಿ ಅವಘಡ ಸಂಭವಿಸಿರುವುದು ಬೆಳಕಿಗೆ ಬಂದಿದೆ ಎಂದು ರಾಜ್ಯ ರೈಲ್ವೆ ಪೊಲೀಸ್ ಎಸ್‌ಪಿ ಸಾರಾ ಫಾತೀಮಾ ತಿಳಿಸಿದ್ದಾರೆ.

ವೃತ್ತಿಯಲ್ಲಿ ಪೇಂಟರ್ ಆಗಿರುವ ರವಿ ಬೋರಕ್‌ತಿರ್ವ ಸಾರ್ವಜನಿಕ ಸ್ಥಳಗಳು ಹಾಗೂ ಕಲ್ಯಾಣ ಮಂಟಪಗಳಲ್ಲಿ ರಾತ್ರಿ ತಂಗುತ್ತಿದ್ದ. ಸೆ.6ರಂದು ರಾತ್ರಿ ಸುಮಾರು 11 ಗಂಟೆಗೆ ಮೆಜೆಸ್ಟಿಕ್ ಯಾರ್ಡ್‌ನಲ್ಲಿದ್ದ ಖಾಲಿ ರೈಲು ಬೋಗಿಯೊಳಗೆ ಅಕ್ರಮವಾಗಿ ಪ್ರವೇಶಿಸಿ, ಅಲ್ಲಿ ಸಿಗರೇಟ್ ಸೇದಿದ್ದಾನೆ. ಬಳಿಕ ಉರಿಯುತ್ತಿದ್ದ ಸಿಗರೇಟ್ ತುಂಡನ್ನು ಬೋಗಿಯೊಳಗೆ ಬಿಸಾಡಿದ್ದರಿಂದ ಬೆಂಕಿ ಹೊತ್ತಿಕೊಂಡಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಿಗರೇಟ್‌ನ ಕಿಡಿ ಬೋಗಿಯಲ್ಲಿದ್ದ ವಸ್ತುಗಳಿಗೆ ಹೊತ್ತಿಕೊಂಡು ಕೆಲವೇ ಸಮಯದಲ್ಲಿ ದಟ್ಟ ಹೊಗೆ ಹಾಗೂ ಜ್ವಾಲೆ ಕಾಣಿಸಿಕೊಂಡಿದೆ. ಬೆಂಕಿ ಕಾಣುತ್ತಿದ್ದಂತೆ ಆರೋಪಿ ಬೋಗಿಯಿಂದ ಇಳಿದು ಸ್ಥಳದಿಂದ ಪರಾರಿಯಾಗಿದ್ದಾನೆ. ಕರ್ತವ್ಯದಲ್ಲಿದ್ದ ರೈಲ್ವೆ ಸಿಬ್ಬಂದಿ ಬೆಂಕಿ ಗಮನಿಸಿ ತಕ್ಷಣ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದರು.

ಅಗ್ನಿಶಾಮಕ ಸಿಬ್ಬಂದಿ ತಕ್ಷಣ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದ ಪರಿಣಾಮ ಪಕ್ಕದ ಹಳಿಗಳು ಹಾಗೂ ಇತರ ರೈಲು ಬೋಗಿಗಳಿಗೆ ಬೆಂಕಿ ಹರಡುವುದು ತಪ್ಪಿದೆ. ಸಿಸಿಟಿವಿ ದೃಶ್ಯಾವಳಿಗಳ ಆಧಾರದ ಮೇಲೆ ಆರೋಪಿಯನ್ನು ಪತ್ತೆಹಚ್ಚಿ ಬಂಧಿಸಲಾಗಿದೆ.

ಆರೋಪಿ ಮಾದಕ ವಸ್ತುಗಳ ಅಮಲಿನಲ್ಲಿದ್ದನೇ ಎಂಬ ಬಗ್ಗೆಯೂ ತನಿಖೆ ನಡೆಸಲಾಗುತ್ತಿದೆ ಎಂದು ರೈಲ್ವೆ ಪೊಲೀಸರು ತಿಳಿಸಿದ್ದಾರೆ.

# ಹಗರಣಗಳ ಸರ್ಕಾರ:
## ಛಲವಾದಿ ನಾರಾಯಣಸ್ವಾಮಿ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಜನರಿಗೆ ಯಾವುದೇ ಉತ್ತಮ ಯೋಜನೆ ನೀಡಿಲ್ಲ; ಬದಲಾಗಿ ಹಗರಣಗಳು, ಭ್ರಷ್ಟಾಚಾರ ಹಾಗೂ ಆಡಳಿತ ವೈಫಲ್ಯಗಳನ್ನೇ ನೀಡಿದೆ ಎಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಚೇರಿ ಜಗನ್ನಾಥ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಭಾರತ್ ಜೋಡೋ' ಹೆಸರಿನಲ್ಲಿ ಕಾಂಗ್ರೆಸ್ ಬೂತ್ ಸಮಿತಿಗಳಿಗೆ ತಲಾ 10 ಲಕ್ಷ ನೀಡುವ ಕಾರ್ಯಕ್ರಮ ರೂಪಿಸಿರುವುದು ತೆರಿಗೆದಾರರ ಹಣದ ದುರುಪಯೋಗ ಎಂದು ದೂರಿದರು. ಪಾರ್ಕ್ ಜಾಗವನ್ನು ಅನ್ಯ ಉದ್ದೇಶಕ್ಕೆ ಬಳಸಲು ಸರ್ಕಾರ ಮುಂದಾಗಿತ್ತು. ವಿಪಕ್ಷಗಳ ಹೋರಾಟದ ಹಿನ್ನೆಲೆಯಲ್ಲಿ ಮಸೂದೆಯನ್ನು ಹಿಂಪಡೆಯಲಾಗಿದೆ ಎಂದರು.



ಬಿಡಿಎ, ವಸತಿ ಮಂಡಳಿ ಹಾಗೂ ಕೆಐಎಡಿಬಿಯಲ್ಲಿ ಪಾರ್ಕ್ ಜಾಗಗಳನ್ನು ಪರಿವರ್ತಿಸಿ ನಿವೇಶನಗಳಾಗಿ ಹಂಚಿಕೆ ಮಾಡಲಾಗುತ್ತಿದೆ. ಕೆಐಎಡಿಬಿಯ ಲೇಔಟ್ ನಕ್ಷೆಗಳಲ್ಲಿ ತಿದ್ದುಪಡಿ ಮಾಡಿ ಕೋಟ್ಯಂತರ ರೂಪಾಯಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪಗಳ ಕುರಿತು ಸರ್ಕಾರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಪೊಲೀಸ್ ಠಾಣೆಗಳಲ್ಲಿ ಸಿವಿಲ್ ವ್ಯವಹಾರಗಳ ಕುರಿತು ಅಕ್ರಮ ಪಂಚಾಯಿತಿ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಗೃಹ ಸಚಿವರು ಕಾನೂನು ಸುವ್ಯವಸ್ಥೆಗಿಂತ ರಾಜಕೀಯ ಟೀಕೆಯಲ್ಲೇ ಹೆಚ್ಚು ತೊಡಗಿದ್ದಾರೆ ಎಂದು ಟೀಕಿಸಿದರು.

ಅಧಿಕಾರಿಗಳ ವಿರುದ್ಧ ದಬ್ಬಾಳಿಕೆ ನಡೆಯುತ್ತಿದೆ ಹಾಗೂ ಭ್ರಷ್ಟಾಚಾರದ ಆರೋಪಗಳಿಗೆ ಜಾತಿಯ ಬಣ್ಣ ಬಳಿಯಲಾಗುತ್ತಿದೆ ಎಂದು ದೂರಿದ ಛಲವಾದಿ, ಸಚಿವರ ಹೇಳಿಕೆಗಳು ಹಾಗೂ ಸರ್ಕಾರದ ಆಡಳಿತ ಕ್ರಮಗಳು ಆಡಳಿತ ವ್ಯವಸ್ಥೆಯ ಅರಾಜಕತೆಯನ್ನು ತೋರಿಸುತ್ತಿವೆ ಎಂದರು.

ಸರ್ಕಾರದ ವೈಫಲ್ಯಗಳನ್ನು ಕೇವಲ ಭಾಷಣಗಳಿಗೆ ಸೀಮಿತಗೊಳಿಸದೆ, ಅಧಿಕಾರ ದುರುಪಯೋಗ ಮತ್ತು ಭ್ರಷ್ಟಾಚಾರದ ವಿರುದ್ಧ ಬಿಜೆಪಿ ಪ್ರಬಲ ಹೋರಾಟ ನಡೆಸಲಿದೆ ಎಂದು ಅವರು ಎಚ್ಚರಿಸಿದರು. ಜನರ ತೆರಿಗೆ ಹಣದ ದುರುಪಯೋಗ ಹಾಗೂ ಭ್ರಷ್ಟಾಚಾರದ ವಿರುದ್ಧ ಬಿಜೆಪಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಿದೆ ಎಂದು ಛಲವಾದಿ ನಾರಾಯಣಸ್ವಾಮಿ ತಿಳಿಸಿದರು."

# ಪೇಪರ್‌ವೇಟ್ ಹಲ್ಲೆ: ಮಾಜಿ ಎಸ್‌ಪಿ ವಿರುದ್ಧ ಎಫ್‌ಐಆರ್ ರದ್ದಿಲ್ಲ

1ನೇ ಪುಟದಿಂದ

ಘಟನೆಗೆ ಸೂಕ್ತ ಕಾರಣಗಳಿದ್ದವೆಯೇ ಅಥವಾ ದೂರಿನಲ್ಲಿ ಉಲ್ಲೇಖಿಸಿರುವ ರೀತಿಯಲ್ಲೇ ಘಟನೆ ನಡೆದಿದೆಯೇ ಎಂಬುದನ್ನು ವಿಚಾರಣೆಯ ಸೂಕ್ತ ಹಂತದಲ್ಲಿ ನಿರ್ಧರಿಸಬೇಕಿದೆ ಎಂದು ಪೀಠ ಹೇಳಿದೆ.

ಪೊಲೀಸ್ ಅಧಿಕಾರಿಗಳು 24 ಗಂಟೆಯೂ ಕರ್ತವ್ಯ ನಿರ್ವಹಿಸಬೇಕಾದ ಸಮವಸ್ತ್ರಧಾರಿ ಪಡೆಯ ಸದಸ್ಯರಾಗಿದ್ದು, ಶಿಸ್ತು ಕಾಪಾಡುವುದು ಅಗತ್ಯ. ದೂರುದಾರರು ಕ್ರೀಡಾ ಚಟುವಟಿಕೆಯಲ್ಲಿ ಭಾಗವಹಿಸದಿರುವುದಕ್ಕೆ ಎರಡನೇ ಆರೋಪಿ ತರಾಟೆಗೆ ತೆಗೆದುಕೊಂಡಿರುವುದು ಮತ್ತು ಮೌಖಿಕವಾಗಿ ಬೆದರಿಸಿರುವ ಆರೋಪಗಳು ಶಿಸ್ತು ಕಾಪಾಡುವ ಉದ್ದೇಶಕ್ಕೆ ಸಂಬಂಧಿಸಿವೆ. ಇವುಗಳನ್ನು ಕರ್ತವ್ಯ ನಿರ್ವಹಣೆಯ ಸಮಂಜಸ ಮಿತಿಮೀರಿದ ಕ್ರಮವೆಂದು ಪರಿಗಣಿಸಬಹುದಾಗಿದೆ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ಸರ್ಕಾರಿ ನೌಕರರು ಹಾಗೂ ಪೊಲೀಸ್ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಅಗತ್ಯವಿದ್ದರೂ, ಈ ಪ್ರಕರಣದಲ್ಲಿ ವಿಚಾರಣಾ ನ್ಯಾಯಾಲಯವು ಆರೋಪಗಳನ್ನು ಪರಿಗಣಿಸುವ ಹಂತವನ್ನು ಈಗಾಗಲೇ ದಾಟಿದೆ. ಹೀಗಾಗಿ ಆರೋಪಿಗಳ ಕೃತ್ಯಗಳು ಅಧಿಕೃತ ಕರ್ತವ್ಯಕ್ಕೆ ಸಂಬಂಧಿಸಿವೆಯೇ ಎಂಬುದನ್ನು ವಿಚಾರಣೆಯ ಸಂದರ್ಭದಲ್ಲಿ ಪರಿಶೀಲಿಸುವುದು ಸೂಕ್ತ ಎಂದು ಪೀಠ ತಿಳಿಸಿದೆ.

ವಿಕಾಶ್ ಕುಮಾರ್ ವಿಕಾಶ್ ವಿರುದ್ಧ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 342, 324, 114, 504, 506 ಹಾಗೂ 34ರ ಅಡಿಯಲ್ಲಿ ದಾಖಲಾಗಿರುವ ಎಫ್‌ಐಆರ್ ಅನ್ನು ಹೈಕೋರ್ಟ್ ಎತ್ತಿಹಿಡಿದಿದೆ.

ಮಲ್ಲಂದೂರು ಪೊಲೀಸ್ ಠಾಣೆಯ ಅಪರಾಧ ವಿಭಾಗದಲ್ಲಿ ಪೊಲೀಸ್ ಸಬ್‌ಇನ್‌ಸ್ಪೆಕ್ಟರ್ ಆಗಿದ್ದ ಜಿ.ಎಸ್. ಚಂದ್ರಶೇಖರ್ ಅವರು 2012ರ ಜನವರಿಯಲ್ಲಿ ಕರ್ತವ್ಯದಲ್ಲಿದ್ದಾಗ, ಕ್ರೀಡಾ ಚಟುವಟಿಕೆಗಳಿಗೆ ಗೈರಾಗಿದ್ದ ಬಗ್ಗೆ ಅಂದಿನ ಸರ್ಕಲ್ ಇನ್‌ಸ್ಪೆಕ್ಟರ್ ಪ್ರಶ್ನಿಸಿದ್ದರು ಎಂದು ದೂರಿನಲ್ಲಿ ಆರೋಪಿಸಲಾಗಿತ್ತು.

ಪ್ರಕರಣದ ವಿಚಾರಣೆಯನ್ನು ಮುಂದುವರಿಸಲು ಯಾವುದೇ ಕಾನೂನು ತಡೆ ಇಲ್ಲ ಎಂದು ಸ್ಪಷ್ಟಪಡಿಸಿರುವ ಹೈಕೋರ್ಟ್, ಆರೋಪಗಳು ಅಧಿಕೃತ ಕರ್ತವ್ಯದ ವ್ಯಾಪ್ತಿಯಲ್ಲಿವೆಯೇ ಅಥವಾ ಅಧಿಕಾರದ ದುರುಪಯೋಗ ನಡೆದಿದೆಯೇ ಎಂಬುದನ್ನು ವಿಚಾರಣಾ ಹಂತದಲ್ಲೇ ನಿರ್ಧರಿಸಬೇಕು ಎಂದು ತಿಳಿಸಿದೆ.

ಅನಾರೋಗ್ಯದ ಕಾರಣದಿಂದ 2011ರ ಡಿಸೆಂಬರ್‌ನಿಂದ ಅಪರಾಧ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿದಾಗ, ಇನ್‌ಸ್ಪೆಕ್ಟರ್ ಅವಾಚ್ಯ ಶಬ್ದಗಳಿಂದ ನಿಂದಿಸಿ ಇಲಾಖಾ ವಿಚಾರಣೆಯ ಬೆದರಿಕೆ ಹಾಕಿದ್ದರು ಎನ್ನಲಾಗಿದೆ. ಬಳಿಕ ದೂರುದಾರರನ್ನು ಅಂದಿನ ಎಸ್‌ಪಿ ಕಚೇರಿಗೆ ಕರೆದೊಯ್ದು, ಅಲ್ಲಿ ವಿಕಾಶ್ ಕುಮಾರ್ ವಿಕಾಶ್ ಅವರು ಬೆದರಿಕೆ ಹಾಕಿ ಪೇಪರ್‌ವೇಟ್ ಎಸೆದು ಗಾಯಗೊಳಿಸಿದ್ದರು ಎಂದು ದೂರಿನಲ್ಲಿ ಉಲ್ಲೇಖಿಸಲಾಗಿತ್ತು. ಈ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ವಿಕಾಶ್ ಕುಮಾರ್ ವಿಕಾಶ್ ಹೈಕೋರ್ಟ್ ಮೊರೆ ಹೋಗಿದ್ದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ದೇವಸ್ಥಾನ, ವಿಭೂತಿ, ನಾಮದಲ್ಲೇ ನೂರು ದಿನ: ಆರ್. ಅಶೋಕ್

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ 100 ದಿನ ಪೂರೈಸಿದ್ದು, ಈ ಅವಧಿಯಲ್ಲಿ ಜನರಿಗೆ ಯಾವುದೇ ಹೊಸ ಅಭಿವೃದ್ಧಿ ಯೋಜನೆ ಸಿಕ್ಕಿಲ್ಲ. ದೇವಸ್ಥಾನ, ವಿಭೂತಿ, ನಾಮದಲ್ಲೇ ನೂರು ದಿನ ಕಳೆದಿವೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ವ್ಯಂಗ್ಯವಾಡಿದರು.

ಮಲ್ಲೇಶ್ವರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ಆಡಳಿತದಲ್ಲಿ ಭ್ರಷ್ಟಾಚಾರ, ಗೊಂದಲ ಮತ್ತು ಯೂಟರ್ನ್‌ಗಳೇ ಹೆಚ್ಚಾಗಿವೆ ಎಂದು ಟೀಕಿಸಿದರು. ಲಾಲ್‌ಬಾಗ್, ಸ್ಯಾಂಕಿ ಟ್ಯಾಂಕ್, ಹೆಬ್ಬಾಳ ಕೆರೆ ಹಾಗೂ ಬಿಡದಿ ಟೌನ್‌ಶಿಪ್ ವಿಚಾರಗಳಲ್ಲಿ ಸರ್ಕಾರದ ವಿರುದ್ಧ ರಿಯಲ್ ಎಸ್ಟೇಟ್ ಹಿತಾಸಕ್ತಿಯ ಆರೋಪ ಮಾಡಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರವಾಗಿದ್ದರೂ ರೈತರಿಗೆ ಸೂಕ್ತ ಪರಿಹಾರ ನೀಡಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗಿವೆ ಎಂದು ಆರೋಪಿಸಿದ ಅವರು, ಬೆಂಗಳೂರು ಕಸ ಹಾಗೂ ಗುಂಡಿಗಳ ಸಮಸ್ಯೆಯಿಂದ ಬಳಲುತ್ತಿದೆ ಎಂದು ದೂರಿದರು.

ಜನರ ಮೇಲೆ ತೆರಿಗೆ ಹೊರೆ ಹೆಚ್ಚಿಸಲಾಗಿದ್ದು, ನೀರು, ಹಾಲು, ಮದ್ಯ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ತೆರಿಗೆ ಏರಿಕೆಯಾಗಿದೆ. ಕಿಸಾನ್ ಸಮ್ಮಾನ್, ವಿದ್ಯಾನಿಧಿ ಸೇರಿದಂತೆ ಬಿಜೆಪಿ ಸರ್ಕಾರದ ಯೋಜನೆಗಳನ್ನು ಸ್ಥಗಿತಗೊಳಿಸಿ, ಹಳೆಯ ಯೋಜನೆಗಳಿಗೆ ಹೊಸ ಹೆಸರು ನೀಡಲಾಗುತ್ತಿದೆ ಎಂದು ಆರೋಪಿಸಿದರು.

ಕೆಪಿಎಸ್‌ಸಿ ಹಾಗೂ ಎಂಜಿನಿಯರ್ ನೇಮಕಾತಿಯಲ್ಲೂ ಅಕ್ರಮಗಳ ಆರೋಪ ಕೇಳಿಬಂದಿದ್ದು, ಸರ್ಕಾರದ ಸಾಧನೆ ಶೂನ್ಯವಾಗಿದೆ. ಜನರ ನಂಬಿಕೆಗೆ ದ್ರೋಹ ಮಾಡಿರುವ ಈ ಸರ್ಕಾರದ ವಿರುದ್ಧ ಬಿಜೆಪಿ ಹೋರಾಟ ನಡೆಸಲಿದೆ ಎಂದು ಅಶೋಕ್ ಎಚ್ಚರಿಸಿದರು.

# ಗ್ರಾಪಂ ಚುನಾವಣೆ: ಮೀಸಲಾತಿ ಪ್ರಕ್ರಿಯೆ ಪೂರ್ಣ



● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ 5,864 ಗ್ರಾಮ ಪಂಚಾಯಿತಿಗಳ ವಾರ್ಡ್‌ಗಳ ಮರುವಿಂಗಡಣೆ ಹಾಗೂ ಸದಸ್ಯ ಸ್ಥಾನಗಳ ಮೀಸಲಾತಿ ನಿಗದಿ ಪ್ರಕ್ರಿಯೆ ಪೂರ್ಣಗೊಂಡಿದ್ದು, ಈ ಕುರಿತು ಎಲ್ಲ ಜಿಲ್ಲಾಧಿಕಾರಿಗಳು ರಾಜ್ಯ ಚುನಾವಣಾ ಆಯೋಗಕ್ಕೆ ಮಾಹಿತಿ ನೀಡಿದ್ದಾರೆ ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ತಿಳಿಸಿದೆ.

ಅವಧಿ ಮುಗಿದ ಗ್ರಾಮ ಪಂಚಾಯಿತಿಗಳಿಗೆ ಚುನಾವಣೆ ನಡೆಸಲು ವಾರ್ಡ್‌ಗಳ ಸಂಖ್ಯೆ ಮತ್ತು ಸದಸ್ಯ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸುವಂತೆ ನಿರ್ದೇಶನ ನೀಡಬೇಕು ಎಂದು ರಾಜ್ಯ ಚುನಾವಣಾ ಆಯೋಗ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ವೇಳೆ ಸರ್ಕಾರ ಈ ಮಾಹಿತಿ ನೀಡಿದೆ.

ನ್ಯಾಯಮೂರ್ತಿ ಅನು ಶಿವರಾಮನ್ ಹಾಗೂ ಟಿ.ಪಿ. ವಿವೇಕಾನಂದ ಅವರ ವಿಭಾಗೀಯ ಪೀಠದ ಮುಂದೆ ಸರ್ಕಾರದ ಪರ ವಕೀಲರು, ವಾರ್ಡ್ ಮರುವಿಂಗಡಣೆ ಹಾಗೂ ಮೀಸಲಾತಿ ನಿಗದಿ ಸೇರಿದಂತೆ ಅಗತ್ಯ ಪ್ರಕ್ರಿಯೆ ಪೂರ್ಣಗೊಂಡಿದೆ. ಮುಂದಿನ ಕ್ರಮ ಕೈಗೊಳ್ಳುವುದು ರಾಜ್ಯ ಚುನಾವಣಾ ಆಯೋಗಕ್ಕೆ ಬಿಟ್ಟ ವಿಚಾರ. ಈ ಸಂಬಂಧ ಪ್ರಮಾಣಪತ್ರವನ್ನೂ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಇದನ್ನು ದಾಖಲಿಸಿಕೊಂಡ ನ್ಯಾಯಪೀಠ, ಸರ್ಕಾರ ಕೈಗೊಳ್ಳಬೇಕಾದ ಪ್ರಕ್ರಿಯೆ ಪೂರ್ಣಗೊಂಡಿರುವುದರಿಂದ ಅರ್ಜಿ ಮುಂದುವರಿಸುವ ಅಗತ್ಯವಿಲ್ಲ ಎಂದು ಅಭಿಪ್ರಾಯಪಟ್ಟಿತು. ಚುನಾವಣೆಗೆ ಸಂಬಂಧಿಸಿದ ಮುಂದಿನ ಅಗತ್ಯ ಕ್ರಮವನ್ನು ರಾಜ್ಯ ಚುನಾವಣಾ ಆಯೋಗ ಕೈಗೊಳ್ಳಬೇಕು ಎಂದು ತಿಳಿಸಿ, ಆಯೋಗದ ಮನವಿ ಮೇರೆಗೆ ವಿಚಾರಣೆಯನ್ನು ಸೆ.17ಕ್ಕೆ ಮುಂದೂಡಿತು.

ಇದೇ ವೇಳೆ, ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ನಿರ್ದೇಶನದಂತೆ ಕರಡು ಮಾರ್ಗಸೂಚಿಗಳನ್ನು ಪ್ರಕಟಿಸಲಾಗುತ್ತಿದೆ ಎಂದು ಸರ್ಕಾರದ ಪರ ವಕೀಲರು ನ್ಯಾಯಾಲಯಕ್ಕೆ ತಿಳಿಸಿದರು. ಸಂಬಂಧಿತ ದಾಖಲೆಗಳನ್ನು ಸಲ್ಲಿಸಲು 10 ದಿನಗಳ ಕಾಲಾವಕಾಶ ಕೋರಿದ ಹಿನ್ನೆಲೆಯಲ್ಲಿ, ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದ ಅರ್ಜಿಗಳ ವಿಚಾರಣೆಯನ್ನು ಸೆ.29ಕ್ಕೆ ಪೀಠ ಮುಂದೂಡಿತು.



ರಾಜ್ಯದಲ್ಲಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ–ವಿಬಿ ಜಿ ರಾಮ್ ಜಿ ಅನುಷ್ಠಾನದ ಕುರಿತು ಅಧ್ಯಯನ ನಡೆಸುತ್ತಿರುವ ಯೆಲೆ ಇನ್‌ಕ್ಲೂಷನ್ ಎಕನಾಮಿಕ್ಸ್ ಇಂಡಿಯಾ ತಂಡದ ಸದಸ್ಯರಾದ ಜೆನ್ನಾ ಅಲ್ಲಾರ್ಡ್ ನೇತೃತ್ವದ ನಿಯೋಗವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಅವರನ್ನು ವಿಕಾಸಸೌಧದಲ್ಲಿ ಭೇಟಿ ಮಾಡಿ ಯೋಜನೆಯ ಅನುಷ್ಠಾನ ಕುರಿತು ಸಂವಾದ ನಡೆಸಿತು. ಈ ಸಂದರ್ಭದಲ್ಲಿ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಳಿಘಾಟ್‌ನಲ್ಲಿ ಮೀನಿನ ಭೋಗ ಸವಿದ ಸುವೇಂದು ಅಧಿಕಾರಿ

1ನೇ ಪುಟದಿಂದ

ಇತ್ತೀಚೆಗೆ ದುರ್ಗಾ ಪೂಜೆ ಸಂದರ್ಭದಲ್ಲಿ ಮಾಂಸಾಹಾರ ಸೇವಿಸುವ ಬಂಗಾಳಿ ಹಿಂದೂಗಳನ್ನು ಬಾಗೇಶ್ವರ್ ಧಾಮದ ಮುಖ್ಯ ಅರ್ಚಕ ಧೀರೇಂದ್ರ ಶಾಸ್ತ್ರಿ ಅವರು ಟೀಕಿಸಿ, ಮಾಂಸಾಹಾರ ತ್ಯಜಿಸುವಂತೆ ಕರೆ ನೀಡಿದ್ದರು. ಅವರ ಹೇಳಿಕೆ ವ್ಯಾಪಕ ಚರ್ಚೆ ಹಾಗೂ ವಿವಾದಕ್ಕೆ ಕಾರಣವಾಗಿತ್ತು.

ಈ ಹಿನ್ನೆಲೆಯಲ್ಲಿ ಸುವೇಂದು ಅಧಿಕಾರಿ ಅವರ ಭೋಗ್ ಸೇವನೆಯ ವಿಡಿಯೋವನ್ನು ಉಲ್ಲೇಖಿಸಿರುವ ಬಿಜೆಪಿ, ಬಂಗಾಳದ ಸಂಪ್ರದಾಯ ಮತ್ತು ಜೀವನಶೈಲಿಯನ್ನು ಗೌರವಿಸುವ ಅಗತ್ಯವಿದೆ ಎಂದು ಹೇಳಿದೆ. “ಕಾಳಿಘಾಟ್‌ನಲ್ಲಿ ಬಂಗಾಳದ ನಂಬಿಕೆ, ಸಂಪ್ರದಾಯ ಮತ್ತು ಜೀವನಶೈಲಿಗೆ ಗೌರವ ಸೂಚಿಸುವ ರೀತಿಯಲ್ಲಿ ಸಾಂಪ್ರದಾಯಿಕ ಮೀನಿನ ಭೋಗ್ ಸೇವಿಸಲಾಗಿದೆ. ಈ ವಿವಾದ ಇಲ್ಲಿಗೇ ಅಂತ್ಯವಾಗಬೇಕು. ಬಿಜೆಪಿ ಬಂಗಾಳದ ಹಿತಾಸಕ್ತಿ ಮತ್ತು ಸಂಪ್ರದಾಯಗಳ ಪರ ಸದಾ ನಿಲ್ಲಲಿದೆ” ಎಂದು ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ ಹೇಳಿದ್ದಾರೆ.

# ಅಂಚೆ ಇಲಾಖೆಯಲ್ಲಿ 23,757 ಜಿಡಿಎಸ್ ಹುದ್ದೆ ನೇಮಕಾತಿ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತೀಯ ಅಂಚೆ ಇಲಾಖೆಯಲ್ಲಿ ಗ್ರಾಮೀಣ ಡಾಕ್ ಸೇವಕ್ (ಜಿಡಿಎಸ್) ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಪ್ರಕಟವಾಗಿದ್ದು, ದೇಶಾದ್ಯಂತ ಒಟ್ಟು 23,757 ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ 1,116 ಹುದ್ದೆಗಳು ಖಾಲಿ ಇದ್ದು, ಬ್ರಾಂಚ್ ಪೋಸ್ಟ್ ಮಾಸ್ಟರ್ (ಬಿಪಿಎಂ) ಹಾಗೂ ಅಸಿಸ್ಟೆಂಟ್ ಬ್ರಾಂಚ್ ಪೋಸ್ಟ್ ಮಾಸ್ಟರ್ (ಎಬಿಪಿಎಂ)/ಗ್ರಾಮೀಣ ಡಾಕ್ ಸೇವಕ್ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಯಿಂದ 10ನೇ ತರಗತಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಗಳ ವಯೋಮಿತಿ ಕನಿಷ್ಠ 18 ಹಾಗೂ ಗರಿಷ್ಠ 40 ವರ್ಷ ನಿಗದಿಪಡಿಸಲಾಗಿದೆ. ಒಬಿಸಿ ಅಭ್ಯರ್ಥಿಗಳಿಗೆ ಮೂರು ವರ್ಷ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಐದು ವರ್ಷ ಹಾಗೂ ವಿಶೇಷಚೇತನ ಅಭ್ಯರ್ಥಿಗಳಿಗೆ 10 ವರ್ಷ ವಯೋಮಿತಿ ಸಡಿಲಿಕೆ ನೀಡಲಾಗಿದೆ.

ಮಹಿಳೆಯರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ವಿಕಲಚೇತನ ಹಾಗೂ ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ. ಇತರೆ ಅಭ್ಯರ್ಥಿಗಳು ರೂ 100 ಅರ್ಜಿ ಶುಲ್ಕ ಪಾವತಿಸಬೇಕು.

ಬಿಪಿಎಂ ಹುದ್ದೆಗೆ ರೂ 12,000ರಿಂದ ರೂ 29,380 ಹಾಗೂ ಎಬಿಪಿಎಂ/ಗ್ರಾಮೀಣ ಡಾಕ್ ಸೇವಕ್ ಹುದ್ದೆಗೆ ರೂ 10,000ರಿಂದ ರೂ 24,470ರವರೆಗೆ ವೇತನ ನಿಗದಿಪಡಿಸಲಾಗಿದೆ.


ಅಭ್ಯರ್ಥಿಗಳ ಆಯ್ಕೆಯನ್ನು ಮೆರಿಟ್ ಆಧಾರದ ಮೇಲೆ ನಡೆಸಲಾಗುತ್ತಿದ್ದು, ಬಳಿಕ ದಾಖಲಾತಿ ಪರಿಶೀಲನೆ ಸೇರಿದಂತೆ ನಿಗದಿತ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಲಾಗುತ್ತದೆ.



ಅರ್ಜಿ ಸಲ್ಲಿಕೆ ಪ್ರಕ್ರಿಯೆ ಸೆ.2ರಿಂದ ಆರಂಭವಾಗಿದ್ದು, ಸೆ.21 ಕೊನೆಯ ದಿನವಾಗಿದೆ. ಅರ್ಜಿಯಲ್ಲಿ ತಪ್ಪುಗಳನ್ನು ತಿದ್ದುಪಡಿ ಮಾಡಲು ಸೆ.23ರಿಂದ 24ರವರೆಗೆ ಅವಕಾಶ ಕಲ್ಪಿಸಲಾಗಿದೆ.

# ಅಕ್ರಮ ಬಂದೂಕು ಒಪ್ಪಿಸಿ, ಇಲ್ಲದಿದ್ದರೆ ಕಠಿಣ ಕ್ರಮ: ಡಿಕೆಶಿ

● ವಿಕ್ರಮ ವಾಹಿನಿ । ಬೆಂಗಳೂರು



**ಪರವಾನಗಿ ಇಲ್ಲದ ಶಸ್ತ್ರಾಸ್ತ್ರಗಳನ್ನು ನ.1ರೊಳಗೆ ಸರ್ಕಾರಕ್ಕೆ ಒಪ್ಪಿಸುವಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚಿಸಿದ್ದು, ಬಳಿಕ ಅಕ್ರಮ ಬಂದೂಕುಗಳು ಪತ್ತೆಯಾದರೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ. ಅರಣ್ಯ ಸಿಬ್ಬಂದಿ ಭತ್ಯೆ ಪರಿಶೀಲನೆ, 'ತೇಗದ ಸಿರಿ' ಯೋಜನೆ ಯಶಸ್ವಿಗೊಳಿಸುವುದು ಹಾಗೂ ನಗರ ಅರಣ್ಯ ಪ್ರದೇಶಗಳಲ್ಲಿ ಟ್ರೀ ಪಾರ್ಕ್‌ಗಳ ನಿರ್ಮಾಣಕ್ಕೂ ಒತ್ತು ನೀಡುವುದಾಗಿ ತಿಳಿಸಿದ್ದಾರೆ.**

ಪರವಾನಗಿ ಇಲ್ಲದ ಅಕ್ರಮ ಬಂದೂಕು ಹಾಗೂ ಶಸ್ತ್ರಾಸ್ತ್ರಗಳನ್ನು ನವೆಂಬರ್ 1ರೊಳಗೆ ಸರ್ಕಾರಕ್ಕೆ ಒಪ್ಪಿಸಬೇಕು. ನಂತರವೂ ಅಕ್ರಮ ಶಸ್ತ್ರಾಸ್ತ್ರಗಳು ಪತ್ತೆಯಾದರೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎಚ್ಚರಿಕೆ ನೀಡಿದರು.

ಮಲ್ಲೇಶ್ವರಂನ ಅರಣ್ಯ ಭವನದಲ್ಲಿ ಶುಕ್ರವಾರ ನಡೆದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ಮಾತನಾಡಿದ ಅವರು, ಅಕ್ರಮ ಬಂದೂಕುಗಳನ್ನು ಸ್ವಯಂಪ್ರೇರಿತವಾಗಿ ಸರ್ಕಾರಕ್ಕೆ ಒಪ್ಪಿಸುವವರ ವಿರುದ್ಧ ಯಾವುದೇ ಪ್ರಕರಣ ದಾಖಲಿಸುವುದಿಲ್ಲ. ಅರಣ್ಯ ಇಲಾಖೆ ಸಿಬ್ಬಂದಿ ಸೇರಿದಂತೆ ಹಲವರು ಪರವಾನಗಿ ಇಲ್ಲದ ಬಂದೂಕುಗಳಿಂದಲೇ ಜೀವ ಕಳೆದುಕೊಂಡಿದ್ದಾರೆ. ಆತ್ಮರಕ್ಷಣೆಗಾಗಿ ಬಂದೂಕು ಹೊಂದಿದ್ದರೆ ಕಡ್ಡಾಯವಾಗಿ ಪರವಾನಗಿ ಪಡೆಯಬೇಕು ಎಂದರು.

ತಮ್ಮ ಕ್ಷೇತ್ರದಲ್ಲಿ ಈ ಹಿಂದೆ 300ಕ್ಕೂ ಹೆಚ್ಚು ನಾಡ ಬಂದೂಕುಗಳನ್ನು ಜನರಿಂದ ಸರ್ಕಾರಕ್ಕೆ ಒಪ್ಪಿಸಲಾಗಿತ್ತು. ರಾಜ್ಯದ ವಿವಿಧೆಡೆ ಇನ್ನೂ ಹೆಚ್ಚಿನ ಅಕ್ರಮ ನಾಡ ಬಂದೂಕುಗಳಿರುವ ಬಗ್ಗೆ ಮಾಹಿತಿ ಇದೆ ಎಂದು ಹೇಳಿದರು.

**ಸಿಬ್ಬಂದಿ ಭತ್ಯೆ ಪರಿಶೀಲನೆ**

ಅರಣ್ಯ ಮತ್ತು ಪೊಲೀಸ್ ಇಲಾಖೆ ಸಿಬ್ಬಂದಿಯ ಭತ್ಯೆ ಹೆಚ್ಚಳಕ್ಕೆ ಸಂಬಂಧಿಸಿದ ಸಚಿವರ ಮನವಿಯನ್ನು ಸರ್ಕಾರ ಪರಿಶೀಲಿಸಲಿದೆ. ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಿ ಎರಡೂ ಇಲಾಖೆಗಳ ಸಿಬ್ಬಂದಿಯನ್ನು ಒಳಗೊಂಡಂತೆ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಅರಣ್ಯ ಇಲಾಖೆ ಅಧಿಕಾರಿಗಳು ಅರಣ್ಯ ಪ್ರದೇಶದ ಜನರೊಂದಿಗೆ ಸ್ನೇಹಪೂರ್ಣ ವಾತಾವರಣ ನಿರ್ಮಿಸಿಕೊಳ್ಳಬೇಕು. ಅರಣ್ಯ ಒತ್ತುವರಿ ಸಮಸ್ಯೆಯನ್ನು ಕಾನೂನು ಪ್ರಕಾರ ಬಗೆಹರಿಸಬೇಕು. ಜನರ ಮೇಲೆ ಅನಗತ್ಯ ಒತ್ತಡ ಹೇರಬಾರದು. ಅಭಿವೃದ್ಧಿ ಕಾಮಗಾರಿಗಳಿಗೆ ಅಡ್ಡಿಯಾಗದೆ ಅಗತ್ಯವಿರುವ ಕಡೆ ನಿಯಮಾನುಸಾರ ವಿನಾಯಿತಿ ನೀಡಬೇಕು ಎಂದು ಸೂಚಿಸಿದರು.

**ತೇಗದ ಸಿರಿ ಯಶಸ್ವಿಗೊಳಿಸಿ**

ತೇಗದ ಸಿರಿ ಯೋಜನೆಯನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಶ್ರಮಿಸಬೇಕು. ಇದರಿಂದ ರೈತರಿಗೆ ಹೆಚ್ಚಿನ ಲಾಭವಾಗಲಿದ್ದು, ಅರಣ್ಯ ಇಲಾಖೆಯ ಆದಾಯ ಹೆಚ್ಚಿಸುವ ಬಗ್ಗೆಯೂ ಗಮನಹರಿಸಬೇಕು ಎಂದು ಹೇಳಿದರು.

ಕಸ್ತೂರಿರಂಗನ್ ವರದಿಗೆ ಸಂಬಂಧಿಸಿದಂತೆ ಕರ್ನಾಟಕಕ್ಕೆ ಒಂದು ರೀತಿಯ ಹಾಗೂ ಕೇರಳಕ್ಕೆ ಮತ್ತೊಂದು ರೀತಿಯ ಮಾನದಂಡ ಅನುಸರಿಸಲಾಗಿದೆ. ಈ ವಿಚಾರದ ಕುರಿತು ಚರ್ಚಿಸಲು ವಿಶೇಷ ಅಧಿವೇಶನ ಕರೆಯುವ ಉದ್ದೇಶವಿದೆ ಎಂದರು.

ನಗರ ಪ್ರದೇಶಗಳಲ್ಲಿರುವ ಅರಣ್ಯ ಇಲಾಖೆಗೆ ಸೇರಿದ ಜಾಗಗಳಲ್ಲಿ ಟ್ರೀ ಪಾರ್ಕ್‌ಗಳನ್ನು ನಿರ್ಮಿಸುವ ಮೂಲಕ ಬೆಂಗಳೂರಿನ ಹಸಿರು ಪ್ರದೇಶ ಹಾಗೂ 'ನಗರದ ಶ್ವಾಸಕೋಶ'ವನ್ನು ವಿಸ್ತರಿಸಲಾಗುವುದು. ಶಾಲಾ ಮಕ್ಕಳ ಮೂಲಕ ಗಿಡ ನೆಡುವ ಕಾರ್ಯಕ್ರಮಗಳಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ತಿಳಿಸಿದರು. ಅರಣ್ಯ ಸಂಪತ್ತು ಮತ್ತು ವನ್ಯಜೀವಿಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯ. ಕಬಿನಿ ಸೇರಿದಂತೆ ರಾಜ್ಯದ ವಿವಿಧ ಅರಣ್ಯ ಪ್ರದೇಶಗಳಲ್ಲಿ ಅಪಾರ ವನ್ಯಜೀವಿ ಸಂಪತ್ತು ಇದೆ. ಮನುಷ್ಯನ ಬದುಕಿಗೂ ಹಸಿರಿಗೂ ಅವಿನಾಭಾವ ಸಂಬಂಧವಿದೆ. ಅರಣ್ಯವನ್ನು ರಕ್ಷಿಸುವಲ್ಲಿ ಪ್ರಾಮಾಣಿಕ ಹಾಗೂ ದಕ್ಷ ಅಧಿಕಾರಿಗಳ ಕೊಡುಗೆ ಮಹತ್ವದ್ದಾಗಿದೆ ಎಂದು ಶಿವಕುಮಾರ್ ಹೇಳಿದರು.

# ಜೈಲಿನ ಮೊಬೈಲ್ ಜಾಲ: 9 ಮಂದಿ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದೊಳಗೆ ಅಕ್ರಮವಾಗಿ ಮೊಬೈಲ್ ಫೋನ್‌ಗಳ ಬಳಕೆ ಹಾಗೂ ಪೂರೈಕೆ ಮಾಡುತ್ತಿದ್ದ ಜಾಲವನ್ನು ಪೊಲೀಸರು ಭೇದಿಸಿದ್ದು, ಮೂವರು ಜೈಲು ಸಿಬ್ಬಂದಿ ಸೇರಿದಂತೆ ಒಟ್ಟು ಒಂಬತ್ತು ಮಂದಿಯನ್ನು ಬಂಧಿಸಿದ್ದಾರೆ.

ಆಗಸ್ಟ್ 11ರಂದು ಕೇಂದ್ರ ಕಾರಾಗೃಹದ ಭದ್ರತಾ ವಿಭಾಗದ ಬ್ಯಾರಕ್‌ಗಳಲ್ಲಿ ನಡೆಸಿದ ದಿಢೀರ್ ತಪಾಸಣೆ ವೇಳೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ವಿಚಾರಣಾಧೀನ ಕೈದಿ ಪ್ರತಾಪ್ ರೈ ಅವರ ಬಳಿ ಮೊಬೈಲ್ ಫೋನ್‌ಗಳು ಪತ್ತೆಯಾಗಿದ್ದವು. ಈ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ನಡೆಸಲಾಗಿತ್ತು.

ತನಿಖೆಯ ವೇಳೆ ಕಾರಾಗೃಹ ಸಿಬ್ಬಂದಿಗಳಾದ ಪ್ರಕಾಶ್ ಮಹಾವೀರ್, ವಿಜಯ್‌ಕುಮಾರ್ ಹಾಗೂ ಶ್ರೀನಿವಾಸ್ ನಾಯ್ಕ, ವಿಚಾರಣಾಧೀನ ಕೈದಿ ಪ್ರತಾಪ್ ರೈ, ಪ್ರಜ್ವಲ್ ರೇವಣ್ಣ, ನವೀನ್ ಕುಮಾರ್, ಸಿದ್ದಿಕ್, ಮೊಹಮ್ಮದ್ ತೌಸಿಫ್ ಹಾಗೂ ಮಂಜುನಾಥ್ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಜೈಲಿನಲ್ಲಿರುವ ಕೈದಿಗಳಿಗೆ ಹಣದ ಆಸೆಗಾಗಿ ಮೊಬೈಲ್ ಫೋನ್ ಹಾಗೂ ಸಿಮ್ ಕಾರ್ಡ್‌ಗಳನ್ನು ಅಕ್ರಮವಾಗಿ ಪೂರೈಸಲಾಗುತ್ತಿತ್ತು. ಒಂದು ಮೊಬೈಲ್‌ಗೆ 1 ಲಕ್ಷ ಹಾಗೂ ಸಿಮ್ ಕಾರ್ಡ್‌ಗೆ 50 ಸಾವಿರದವರೆಗೆ ಹಣ ಪಡೆಯಲಾಗುತ್ತಿತ್ತು ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಏರ್‌ಟೆಲ್‌ನ ಎರಡು ಸಿಮ್‌ಗಳ ಸಂಖ್ಯೆಗಳ ಆಧಾರದಲ್ಲಿ ಅವು ಯಾವ ಮೊಬೈಲ್‌ಗಳಲ್ಲಿ ಬಳಕೆಯಾಗಿವೆ ಎಂಬುದನ್ನು ಸಿಇಐಆರ್ ಪೋರ್ಟಲ್ ಮೂಲಕ ಪೊಲೀಸರು ಪತ್ತೆಹಚ್ಚಿದ್ದಾರೆ.

ಈ ತಾಂತ್ರಿಕ ಮಾಹಿತಿ ಆಧರಿಸಿ ಎರಡು ಮೊಬೈಲ್‌ಗಳು ಕಾರಾಗೃಹದ ವೀಕ್ಷಕ ಸಿಬ್ಬಂದಿ ಶ್ರೀನಿವಾಸ್ ನಾಯ್ಕ ಬಳಿ ಇರುವುದು ಪತ್ತೆಯಾಗಿದೆ.

ಕಾರಾಗೃಹದಲ್ಲಿ ಪತ್ತೆಯಾದ ಮತ್ತೊಂದು ಮೊಬೈಲ್ ಮತ್ತು ಸಿಮ್ ಕಾರ್ಡ್ ಕುರಿತು ತನಿಖೆ ನಡೆಸಿದಾಗ, ಮೊಬೈಲ್ ಆಂಧ್ರಪ್ರದೇಶದ ಏಜೆನ್ಸಿಯೊಂದಕ್ಕೆ ಮಾರಾಟವಾಗಿರುವುದು ಪತ್ತೆಯಾಯಿತು. ಮಾರಾಟದ ವಿವರಗಳನ್ನು ಪರಿಶೀಲಿಸಿದಾಗ ಭರತ್ ಅಲಿಯಾಸ್ ಭುವನ್ ಎಂಬಾತ ಅದನ್ನು ಖರೀದಿಸಿರುವುದು ಗೊತ್ತಾಯಿತು.

ಆತನನ್ನು ಪತ್ತೆಹಚ್ಚಿ ವಿಚಾರಣೆ ನಡೆಸಿದಾಗ, ಕಾರಾಗೃಹದಲ್ಲಿರುವ ಭರತ್ ಅಲಿಯಾಸ್ ಕೆಟಿಎಂ ಭರತ್ ನೀಡಿದ ಸೂಚನೆಯಂತೆ ಮೊಬೈಲ್ ಪೂರೈಕೆ ಮಾಡಿರುವುದು ಬೆಳಕಿಗೆ ಬಂದಿದೆ. ಈ ಪ್ರಕರಣದಲ್ಲಿ ಕೇಂದ್ರ ಕಾರಾಗೃಹದ ಮುಖ್ಯ ವೀಕ್ಷಕ ವಿಜಯ್‌ಕುಮಾರ್ ಕೂಡ ಭಾಗಿಯಾಗಿರುವುದು ತನಿಖೆಯಿಂದ ತಿಳಿದುಬಂದಿದೆ ಎಂದು ಪೊಲೀಸರು ಹೇಳಿದ್ದಾರೆ.

# ಮುಂದಿನ ಪ್ರಧಾನಮಂತ್ರಿ ರಾಹುಲ್ ಗಾಂಧಿ: ಕೆ.ಎಚ್.ಮುನಿಯಪ್ಪ

● ವಿಕ್ರಮ ವಾಹಿನಿ । ಬೆಂಗಳೂರು

ಬಿಜೆಪಿಯವರು ಇತರೆ ಪಕ್ಷಗಳ ಪ್ರಭಾವಿಗಳನ್ನು ತಮ್ಮ ಪಕ್ಷಕ್ಕೆ ಸೆಳೆಯುವ ತಂತ್ರ ಮಾಡುತ್ತಿದ್ದಾರೆ. ಇವರ ತಂತ್ರ ಫಲಿಸದೇ ಹೋದರೆ ಅಂಥವರ ವಿರುದ್ಧ ಇ.ಡಿ.ತನಿಖೆ ನಡೆಸುತ್ತಾರೆ. ಬಿಜೆಪಿಯವರ ಈ ಬ್ಲಾಕ್ ಮೇಲ್ ತಂತ್ರ ಇಡೀ ದೇಶವೇ ನೋಡುತ್ತಿದೆ. ಮುಂದಿನ ಬಾರಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ಯಶಸ್ಸು ಪಡೆಯಲಿದ್ದು, ಆಗ ಭಾರತದ ಪ್ರಧಾನಮಂತ್ರಿಯಾಗಿ ರಾಹುಲ್ ಗಾಂಧಿ ನಿಯುಕ್ತಿಗೊಳ್ಳಲಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ಭವಿಷ್ಯ ನುಡಿದರು.



ವಿಧಾನಸೌಧದಲ್ಲಿ ಎಸ್ ಸಿ ಎಸ್ ಪಿ–ಟಿ ಎಸ್ ಪಿ ಅನುದಾನ ಮತ್ತು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆಗೆ ಸಂಬಂಧಿಸಿದಂತೆ ಸುದ್ದಿಗೋಷ್ಠಿ ನಡೆಸಿದ ಅವರನ್ನು ಪತ್ರಕರ್ತರು, ಜಾರಕಿಹೊಳಿ ವಿಷಯ ಪ್ರಸ್ತಾಪಿಸಿದಾಗ ಈ ಕುರಿತು ಪ್ರತಿಕ್ರಿಯಿಸಿ, ದೇಶದಲ್ಲಿ ಜಾರಿ ನಿರ್ದೇಶನಾಲಯ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿಲ್ಲ. ಜಾರಕಿಹೊಳಿ ಅವರು ಕಷ್ಟ ಪಟ್ಟು ಮೇಲೆ ಬಂದಿದ್ದಾರೆ. ಅವರನ್ನು ಬಿಜೆಪಿಗೆ ಸೆಳೆಯುವ ಹುನ್ನಾರ ಇತ್ತು. ಅವರು ಕಾಂಗ್ರೆಸ್ ತೊರೆದು ಬಿಜೆಪಿಯತ್ತ ವಾಲಲಿಲ್ಲ. ಈ ಕಾರಣಕ್ಕಾಗಿ ಜಾರಕಿಹೊಳಿ ಅವರ ವಿರುದ್ಧ ಇ.ಡಿ.ತನಿಖೆ ನಡೆದಿದೆ. ಬಿಜೆಪಿಯವರಿಗೆ 2029ರ ಸಂಸತ್ ಚುನಾವಣೆಯಲ್ಲಿ ದೇಶದ ಜನತೆ ಬಿಜೆಪಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಬಿಜೆಪಿಯವರು ಕೋಮುಗಲಭೆ ಸೃಷ್ಟಿಸುವುದನ್ನು ಭಾರತದಾದ್ಯಂತ ಮಾಡುತ್ತಿದ್ದಾರೆ. ಇವರಿಗೆ ಸುಪ್ರೀಂ ಕೋರ್ಟ್ ಛೀ ಮಾರಿ ಹಾಕಿದ್ದರೂ ಕೇಳುತ್ತಿಲ್ಲ. ಇವರು ಯಾವುದೇ ದಾಳಿ ನಡೆಸಿದರೂ ರಾಜಕೀಯ ಪ್ರೇರಿತವಾಗಿರುತ್ತವೆ. ಜಾರಕಿಹೊಳಿ ಸೇರಿದಂತೆ ಕಾಂಗ್ರೆಸ್ ನ ಯಾವುದೇ ಮುಖಂಡರು ಇಂತಹ ಕೃತ್ಯಗಳಿಗೆ ಭಯ ಪಡುವುದಿಲ್ಲ.

ಎನ್ ಡಿ ಎ ಮೈತ್ರಿಕೂಟದಲ್ಲಿರುವ ಆಂಧ್ರಪ್ರದೇಶದ ಚಂದ್ರಬಾಬು ನಾಯ್ಡು ಅವರಿಗೆ ಕೇಂದ್ರದ ಬಿಜೆಪಿ ಸರ್ಕಾರ ಇದುವರೆಗೆ 40 ಸಾವಿರ ಕೋಟಿ ಅನುದಾನ ನೀಡಿದೆ. ನಮ್ಮ ರಾಜ್ಯಕ್ಕೆ ಕೇವಲ ರೂ.5 ಸಾವಿರ ಕೋಟಿ ಘೋಷಣೆ ಮಾಡಲಾಗಿದೆ. ಅರ್ಥ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಘೋಷಿಸಿದರೆ ವಿನಾ ಒಂದು ರೂಪಾಯಿ ಹಣ ಬಿಡುಗಡೆ ಮಾಡಿಲ್ಲ. ರಾಜ್ಯದವರೇ ಆದ ಪ್ರಹ್ಲಾದ್ ಜೋಶಿ, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ ಇನ್ನಿತರರು ಕೇಂದ್ರದಲ್ಲಿ ಸಚಿವರಾಗಿದ್ದಾರೆ.

ಪಕ್ಷ ಯಾವುದಾದರೇನು? ಅಭಿವೃದ್ಧಿಯ ವಿಚಾರದಲ್ಲಿ ತಾರತಮ್ಯ ಮಾಡಬಾರದು ಎಂದು ಬಿಜೆಪಿ ಮತ್ತು ಬಿಜೆಪಿಯ ರಾಜ್ಯ ಸಚಿವರ ವಿರುದ್ಧ ಕಿಡಿ ಕಾರಿದರು.

# ಹಾವು ವಿಷಕ್ಕೆ ಐಐಎಸ್ಸಿ ವಿಜ್ಞಾನಿಗಳ ನೂತನ ಪ್ರತಿವಿಷ!

## ನಾಗರಹಾವು, ಕಾಳಿಂಗ ಸರ್ಪ ಸೇರಿದಂತೆ ಹಲವು ಪ್ರಭೇದಗಳ ವಿಷ ತಟಸ್ಥಗೊಳಿಸುವ ಸಂಶ್ಲೇಷಿತ ಪ್ರತಿಕಾಯ ಅಭಿವೃದ್ಧಿ

● ವಿಕ್ರಮ ವಾಹಿನಿ । ಬೆಂಗಳೂರು

ನಾಗರಹಾವು, ಕಾಳಿಂಗ ಸರ್ಪ ಸೇರಿದಂತೆ ಹಲವು ವಿಷಕಾರಿ ಹಾವುಗಳ ವಿಷವನ್ನು ತಟಸ್ಥಗೊಳಿಸುವ ಸಾಮರ್ಥ್ಯ ಹೊಂದಿರುವ ನೂತನ ಸಂಶ್ಲೇಷಿತ ಪ್ರತಿವಿಷವನ್ನು ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್ಸಿ) ವಿಜ್ಞಾನಿಗಳು ಅಭಿವೃದ್ಧಿಪಡಿಸಿದ್ದಾರೆ. ಡೆನ್ಮಾರ್ಕ್‌ನ ತಾಂತ್ರಿಕ ವಿಶ್ವವಿದ್ಯಾಲಯದ (ಡಿಟಿಯು) ಸಂಶೋಧಕರ ಸಹಯೋಗದಲ್ಲಿ ನಡೆಸಿದ ಈ ಅಧ್ಯಯನವು ಹಾವು ಕಡಿತ ಚಿಕಿತ್ಸೆಯಲ್ಲಿ ಹೊಸ ಭರವಸೆ ಮೂಡಿಸಿದೆ.

ಐಐಎಸ್ಸಿಯ ಪರಿಸರ ವಿಜ್ಞಾನ ಕೇಂದ್ರದ ಸಹ ಪ್ರಾಧ್ಯಾಪಕ ಕಾರ್ತಿಕ್ ಸುನಾಗರ್ ಹಾಗೂ ಡಿಟಿಯು ಪ್ರಾಧ್ಯಾಪಕ ಆಂಡ್ರಿಯಾಸ್ ಲೌಸ್ಟೆನ್ ನೇತೃತ್ವದ ಸಂಶೋಧನಾ ತಂಡವು ಐದು ಸಣ್ಣ ಪ್ರತಿಕಾಯ ತುಣುಕುಗಳನ್ನು (ನ್ಯಾನೊಬಾಡಿಗಳು) ಆಯ್ಕೆ ಮಾಡಿ, ಅವುಗಳನ್ನು ವಿವಿಧ ಹಾವುಗಳ ವಿಷದ ವಿರುದ್ಧ ಪರೀಕ್ಷಿಸಿದೆ. ಈ ನ್ಯಾನೊಬಾಡಿಗಳ ಸಂಯೋಜನೆಯಿಂದ ಸಿದ್ಧಪಡಿಸಿದ 'ನ್ಯಾನೊಬಾಡಿ ಕಾಕ್‌ಟೈಲ್' ವಿಷದ ಪರಿಣಾಮವನ್ನು ತಟಸ್ಥಗೊಳಿಸುವಲ್ಲಿ ಯಶಸ್ವಿಯಾಗಿದೆ.



**ಇಲಿಗಳಲ್ಲಿ ಯಶಸ್ವಿ ಪ್ರಯೋಗ**

ಸ್ಪೆಕ್ಟಾಕಲ್ಡ್ ಕೋಬ್ರಾ, ಮೊನೊಕ್ಲ್ಡ್ ಕೋಬ್ರಾ ಹಾಗೂ ಭಾರತೀಯ ಕಿಂಗ್ ಕೋಬ್ರಾ ಸೇರಿದಂತೆ ವಿವಿಧ ಪ್ರಭೇದಗಳ ವಿಷವನ್ನು ಚುಚ್ಚಲಾಗಿದ್ದ ಇಲಿಗಳಿಗೆ ಈ ಪ್ರತಿವಿಷ ನೀಡಿದಾಗ ಅವು ಸಾವಿನಿಂದ ಪಾರಾಗಿವೆ. ವಿಷ ಚುಚ್ಚಿದ ಸುಮಾರು 30 ನಿಮಿಷಗಳ ಬಳಿಕ ಪ್ರತಿವಿಷ ನೀಡಿದ ಸಂದರ್ಭದಲ್ಲಿಯೂ ಇಲಿಗಳನ್ನು ರಕ್ಷಿಸಲು ಸಾಧ್ಯವಾಗಿದ್ದು, ವಿಷದ ಪರಿಣಾಮದಿಂದ ಪಾರ್ಶ್ವವಾಯು ಅಥವಾ ನರವಿಷದ ಲಕ್ಷಣಗಳಿಗೆ ಒಳಗಾಗಿದ್ದ ಇಲಿಗಳು ಸಹ ಚೇತರಿಸಿಕೊಂಡಿವೆ ಎಂದು ಸಂಶೋಧಕರು ತಿಳಿಸಿದ್ದಾರೆ.

**ಸಾಂಪ್ರದಾಯಿಕ ಪ್ರತಿವಿಷಕ್ಕೆ ಪರ್ಯಾಯ**

ಪ್ರಸ್ತುತ ಬಳಕೆಯಲ್ಲಿರುವ ಪ್ರತಿವಿಷವನ್ನು ಸಾಮಾನ್ಯವಾಗಿ ಕುದುರೆಗಳಂತಹ ಪ್ರಾಣಿಗಳಿಗೆ ಹಾವಿನ ವಿಷದ ವಿರುದ್ಧ ರೋಗನಿರೋಧಕ ಶಕ್ತಿ ಬೆಳೆಸಿ, ಅವುಗಳ ರಕ್ತದಿಂದ ಪ್ರತಿಕಾಯಗಳನ್ನು ಪಡೆದು ತಯಾರಿಸಲಾಗುತ್ತದೆ. ಈ ಶತಮಾನಕ್ಕೂ ಹೆಚ್ಚು ಹಳೆಯ ವಿಧಾನದಲ್ಲಿ ಉತ್ಪನ್ನದ ಗುಣಮಟ್ಟದಲ್ಲಿ ವ್ಯತ್ಯಾಸ, ಅಡ್ಡಪರಿಣಾಮಗಳು ಹಾಗೂ ನಿರ್ದಿಷ್ಟ ಹಾವುಗಳ ವಿಷದ ವಿರುದ್ಧ ಸೀಮಿತ ಪರಿಣಾಮಕಾರಿತ್ವದಂತಹ ಸಮಸ್ಯೆಗಳಿವೆ ಎಂದು ಸಂಶೋಧಕರು ಹೇಳಿದ್ದಾರೆ.

ಹೊಸ ಸಂಶ್ಲೇಷಿತ ಪ್ರತಿಕಾಯಗಳನ್ನು ಸೂಕ್ಷ್ಮಜೀವಿ ಅಥವಾ ಮಾನವೀಕೃತ ವ್ಯವಸ್ಥೆಗಳ ಮೂಲಕ ಉತ್ಪಾದಿಸಬಹುದಾಗಿದ್ದು, ಅಗತ್ಯಕ್ಕೆ ಅನುಗುಣವಾಗಿ ವಿವಿಧ ಹಾವುಗಳ ವಿಷವನ್ನು ಗುರಿಯಾಗಿಸುವ ಹೆಚ್ಚುವರಿ ಘಟಕಗಳನ್ನು ಸೇರಿಸಬಹುದಾಗಿದೆ.

“ವಿಷ ಚುಚ್ಚಿದ 30 ನಿಮಿಷಗಳ ಬಳಿಕವೂ ನ್ಯಾನೊಬಾಡಿ ಕಾಕ್‌ಟೈಲ್ ಇಲಿಗಳನ್ನು ಸಾವಿನಿಂದ ರಕ್ಷಿಸಿದೆ. ನರವಿಷದ ಪರಿಣಾಮದಿಂದ ಬಳಲುತ್ತಿದ್ದ ಇಲಿಗಳು ಸಹ ಸಂಪೂರ್ಣವಾಗಿ ಚೇತರಿಸಿಕೊಂಡಿವೆ” ಎಂದು ಪ್ರೊ. ಕಾರ್ತಿಕ್ ಸುನಾಗರ್ ತಿಳಿಸಿದ್ದಾರೆ.

ಈ ಪ್ರತಿವಿಷವನ್ನು ಮಾನವರಲ್ಲಿ ಪರೀಕ್ಷಿಸಿ ವೈದ್ಯಕೀಯ ಬಳಕೆಗೆ ತರುವ ಮುನ್ನ ಇನ್ನಷ್ಟು ಅಧ್ಯಯನ ಹಾಗೂ ಪ್ರಯೋಗಗಳ ಅಗತ್ಯವಿದೆ ಎಂದು ಸಂಶೋಧಕರು ಸ್ಪಷ್ಟಪಡಿಸಿದ್ದಾರೆ. ಜಗತ್ತಿನ ವಿವಿಧ ಭಾಗಗಳ ಸ್ಥಳೀಯ ಹಾವುಗಳ ವಿಷಕ್ಕೆ ಅನುಗುಣವಾಗಿ ಮರುಸಂಯೋಜಿತ ಪ್ರತಿವಿಷಗಳನ್ನು ಅಭಿವೃದ್ಧಿಪಡಿಸಲು ಈ ಸಂಶೋಧನೆ ಮಾರ್ಗದರ್ಶಿಯಾಗಲಿದೆ ಎಂದು ಡಿಟಿಯು ಪ್ರಾಧ್ಯಾಪಕ ಆಂಡ್ರಿಯಾಸ್ ಲೌಸ್ಟೆನ್ ಹೇಳಿದ್ದಾರೆ.

# ಪಾವಗಡದಲ್ಲಿ ನಕಲಿ ನಕ್ಸಲ್ ಕಾಟ; ರೂ 5 ಲಕ್ಷಕ್ಕೆ ಬೇಡಿಕೆ

● ವಿಕ್ರಮ ವಾಹಿನಿ । ತುಮಕೂರು

ರೈತರ ಪಂಪ್‌ಸೆಟ್‌ಗೆ ಬಾಂಬ್ ಇಟ್ಟು ಸ್ಫೋಟಿಸಿದ್ದಾನೆ ಎಂದು ಆರೋಪಿಸಲಾಗಿರುವ ನಕಲಿ ನಕ್ಸಲ್ ಕನಕಲ ಬಂಡೆ ವೆಂಕಟೇಶ್ ಇದೀಗ ರೂ 5 ಲಕ್ಷಕ್ಕೆ ಬೇಡಿಕೆ ಇಟ್ಟು ಬೆದರಿಕೆ ಹಾಕಿರುವ ಆರೋಪ ಪಾವಗಡದಲ್ಲಿ ಕೇಳಿಬಂದಿದೆ.

ಪಾವಗಡ ತಾಲೂಕಿನ ಗಂಗಸಾಗರದ ಮುತ್ತವ್ವ ಭೂಷಪ್ಪ ಎಂಬುವವರ ತೋಟದ ಶೆಡ್ ಬಾಗಿಲಿಗೆ ಬೆದರಿಕೆ ಪತ್ರವೊಂದನ್ನು ಅಂಟಿಸಲಾಗಿದೆ. ಸಿಪಿಐ(ಎಂಎಲ್), ಸಿಪಿಎಂ ಪೀಪಲ್ಸ್ ವಾರ್ ಜನಶಕ್ತಿ ಪಾರ್ಟಿ ಹೆಸರಿನಲ್ಲಿ ತೆಲುಗು ಭಾಷೆಯಲ್ಲಿ ಪತ್ರ ಬರೆಯಲಾಗಿದ್ದು, ಸೆ.16ರೊಳಗೆ ರೂ 5 ಲಕ್ಷ ಹಣ ನೀಡುವಂತೆ ಬೇಡಿಕೆ ಇಡಲಾಗಿದೆ ಎನ್ನಲಾಗಿದೆ.

ಹಣವನ್ನು ವಕೀಲ ಸುಬ್ಬರಾಯಪ್ಪ ಅವರ ಬಳಿ ಕಳುಹಿಸಿ, ಬಳಿಕ ಕ್ರಾಮೆಡ್ ದೇವಣ್ಣ ದಳಂಗೆ ನೀಡುವಂತೆ ಪತ್ರದಲ್ಲಿ ಸೂಚಿಸಲಾಗಿದೆ. ಕನಕಲ ಬಂಡೆ ವೆಂಕಟೇಶ್ ವಿರುದ್ಧ ಹಲವು ಪ್ರಕರಣಗಳಿದ್ದು, ಅವುಗಳ ವಿಚಾರಣೆ ನಡೆಸಲು ಹೆಚ್ಚಿನ ಹಣದ ಅಗತ್ಯವಿದೆ ಎಂಬುದನ್ನೂ ಪತ್ರದಲ್ಲಿ ಉಲ್ಲೇಖಿಸಲಾಗಿದೆ ಎಂದು ತಿಳಿದುಬಂದಿದೆ.

ಬೆದರಿಕೆ ಪತ್ರ ಪತ್ತೆಯಾದ ಹಿನ್ನೆಲೆಯಲ್ಲಿ ಆತಂಕಗೊಂಡಿರುವ ಮುತ್ತವ್ವ ಭೂಷಪ್ಪ ಅವರ ಕುಟುಂಬ ಪಾವಗಡ ಪೊಲೀಸ್ ಠಾಣೆಗೆ ದೂರು ನೀಡಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಬೆದರಿಕೆ ಪತ್ರದ ಸತ್ಯಾಸತ್ಯತೆ ಹಾಗೂ ಹಣಕ್ಕೆ ಬೇಡಿಕೆ ಇಟ್ಟಿರುವವರ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

ಬೆದರಿಕೆ ಪತ್ರದ ಹಿನ್ನೆಲೆಯಲ್ಲಿ ಕುಟುಂಬಕ್ಕೆ ಭದ್ರತೆ ಒದಗಿಸುವಂತೆ ಸ್ಥಳೀಯರು ಪೊಲೀಸರನ್ನು ಒತ್ತಾಯಿಸಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 162,